ಸಂಪುಟ : 9 ಸಂಚಿಕೆ 102 ಪುಟ : 4 ಬೆಲೆ: 3.00 ಶುಕ್ರವಾರ ಮೇ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 102 Pages : 4 Price : 3.00 Friday May 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಮುಖ್ಯಮಂತ್ರಿಗಳಿಂದ ಬರ ನಿರ್ವಹಣೆ ಕುರಿತು ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ

# ಸಮರ್ಪಕ ಬಿತ್ತನೆ ಬೀಜ, ರಸಗೊಬ್ಬರ ವಿತರಣೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆ ಚುನಾವಣೆಯ ಮತದಾನ ಮುಕ್ತಾಯವಾಗಿದ್ದು, ಚುನಾವಣಾ ಆಯೋಗವು ಮಾದರಿ ನೀತಿ ಸಂಹಿತೆಯಿಂದ ಸಡಿಲಿಕೆ ನೀಡಿರುವುದರಿಂದ ಬರಗಾಲ ನಿರ್ವಹಣೆ ಸೇರಿದಂತೆ ಅಭಿವೃದ್ಧಿ ಕೆಲಸದ ಕಡೆ ಅಧಿಕಾರಿಗಳು ಹೆಚ್ಚು ಗಮನ ಹರಿಸಬೇಕು ಎಂದು ಜಿಲ್ಲೆಯ ಡಿ.ಸಿ., ಜಿಲ್ಲಾ ಪಂಚಾಯತ್ ಸಿಇಓಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ ನೀಡಿದರು.

ಗುರುವಾರ ತಮ್ಮ ಸಂಪುಟದ ಸಹೋದ್ಯೋಗಿಗಳೊಂದಿಗೆ ಗೃಹ ಕಚೇರಿ 'ಕೃಷ್ಣಾ'ದಿಂದ ವಿಡಿಯೋ ಸಂವಾದ ನಡೆಸಿ, ರಾಜ್ಯದ ಎಲ್ಲಾ ಡಿ.ಸಿ, ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಬರಗಾಲ ನಿರ್ವಹಣೆ ಕುರಿತು ಪ್ರಗತಿ ಪರಿಶೀಲನೆ ನಡೆಸಿದ ಮುಖ್ಯಮಂತ್ರಿಗಳು, ಮುಂಗಾರು ಪೂರ್ವ ಮಳೆ ಎಲ್ಲೆಡೆ ಉತ್ತಮವಾಗಿದೆ. ಹೀಗಾಗಿ ಬಿತ್ತನೆ ಕಾರ್ಯ ಚುರುಕಾಗಬೇಕು. ಡಿ.ಸಿ., ಜಿಲ್ಲಾ ಪಂಚಾಯತ್ ಸಿಇಓ ಇದರ ಮೇಲುಸ್ತುವಾರಿ ವಹಿಸಬೇಕು ಎಂದರು.

ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳು ಎಲ್ಲಿಯೂ ಕೊರತೆಯಾಗದಂತೆ ನೋಡಬೇಕು. ರಾಜ್ಯದಲ್ಲಿ ದಾಸ್ತಾನು ಸಾಕಷ್ಟಿದ್ದು, ಜಿಲ್ಲಾ, ತಾಲೂಕಿಗೆ ಬೇಡಿಕೆಗೆ ಅನುಗುಣವಾಗಿ ಬೀಜ, ರಸಗೊಬ್ಬರ, ಕೀಟನಾಶಕ ಸರಿಯಾಗಿ ಪೂರೈಸಬೇಕು.

> ಪರಿಹಾರ ವಿತರಣೆ ಮಾಡುವಾಗ ಪ್ರತಿಯೊಬ್ಬ ರೈತರ ಹೊಲದಲ್ಲಿಯೂ ಕ್ರಾಪ್ ಸರ್ವೇ ಲಿಂಕ್ ಮಾಡಲಾಗಿದೆ. 5591 ಫಲಾನುಭವಿಗಳ ಆಧಾರ ಮತ್ತು ಬ್ಯಾಂಕ್ ಖಾತೆ, ಫ್ರೂಟ್ಸ್ ಐಡಿಗಳಲ್ಲಿ ಹೆಸರಿನ ವ್ಯತ್ಯಾಸ ಮತ್ತು ಇತರೆ ಕಾರಣದಿಂದಾಗಿ ಪರಿಹಾರ ಜಮೆ ಆಗದೇ ಇದ್ದು ಅವುಗಳನ್ನು ಸರಿಪಡಿಸುವ ಕಾರ್ಯ ಪ್ರಗತಿಯಲ್ಲಿದೆ. 2023ರ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಹಾನಿಗೆ ಒಟ್ಟಾರೆ 1,13,778 ಫಲಾನುಭವಿಗಳಿಗೆ 1ರಿಂದ 10 ಹಂತದವರೆಗೆ 110 ಕೋಟಿ ರೂ ಬೆಳೆ ಹಾನಿ ಪರಿಹಾರ ಧನ ವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ವಿವರಿಸಿದರು.



ಇದಕ್ಕೆ ಸರಿಯಾಗಿ ಯೋಜನೆ ರೂಪಿಸಿ ವಿತರಣೆಗೆ ಕ್ರಮ ಕೈಗೊಳ್ಳಬೇಕು.

ಈ ಕುರಿತು ರೈತ-ರಿಂದ ದೂರಗಳು ಬಾರದಂತೆ ನೋಡಿಕೊಳ್ಳಬೇಕು.

ಹಾವೇರಿಯಲ್ಲಿ ಬಿತ್ತನೆ ಬೀಜಕ್ಕೆ ಜನ ಸಾಲುಗಟ್ಟಿ ನಿಂತಿರುವುದು ಮಾಧ್ಯಮಗಳ ಮುಖಾಂತರ ತಿಳಿದುಬಂದಿದೆ. ಈ ರೀತಿ ಆಗಬಾರದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಮಳೆಗಾಲ ಆರಂಭಕ್ಕೆ ಇನ್ನೂ 15–20 ದಿನಗಳು ಉಳಿದಿವೆ. ಮಳೆಗಾಲ ಆರಂಭವಾದ ನಂತರ ಹೊಸ ನೀರಿನಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇದ್ದು, ಆರೋಗ್ಯ ಇಲಾಖೆ ಈಗಿನಿಂದಲೇ ಪೂರ್ವ ತಯಾರಿ ಮಾಡಿಕೊಂಡು ಅದರ ನಿಯಂತ್ರಣಕ್ಕೆ ಮುಂದಾಗಬೇಕು.

> ಕಾನೂನು, ಸಂಸದೀಯ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ ಮಾತನಾಡಿ, ರಾಜ್ಯದಲ್ಲಿ ರೈತರ ಆತ್ಮಹತ್ಯೆಯ ಪ್ರಕರಣಗಳ ಸಂಖ್ಯೆಯ ಕಡೆಗೆ ಅಧಿಕಾರಿಗಳು ಗಮನಹರಿಸಬೇಕು. ರೈತರಲ್ಲಿ ಆತ್ಮವಿಶ್ವಾಸ ತುಂಬುವ ಕೆಲಸವಾಗಬೇಕು. ಸರ್ಕಾರದ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪಿರುವ ಕುರಿತು ಮನವರಿಕೆ ಅಗತ್ಯವಾಗಿದೆ ಎಂದರು.

ಎಲ್ಲಿಯೂ ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚರ ವಹಿಸಬೇಕು.

ನೀರು ಪೂರೈಕೆಗೂ ಮುನ್ನ ಅದು ಕುಡಿಯಲು ಯೋಗ್ಯವಾಗಿದೆಯೇ ಎಂದು ಪರೀಕ್ಷಿಸಿ ಪೂರೈಸಬೇಕು ಎಂದು ಸಿ.ಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಜೆಟ್ ಘೋಷಣೆಗಳಿಗೆ ಸಂಬಂಧಿಸಿದಂತೆ ಜೂನ್ ಕೊನೆಯ ವೇಳೆಗೆ ಆದೇಶ ಹೊರ ಬರಬೇಕು. ಕಾಮಗಾರಿಗಳಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಕೂಡ ಶೀಘ್ರವಾಗಿ ಆಗಬೇಕು. ಚುನಾವಣೆ ಮುಗಿದಿದೆ. ನೀತಿ ಸಂಹಿತೆ ಸಡಿಲವಾಗಿದೆ. ಹೀಗಾಗಿ ಅಧಿಕಾರಿಗಳು ಅಭಿವೃದ್ಧಿ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ಈ ವರ್ಷದ ಸಾಲ ಯೋಜನೆ ಕಳುಹಿಸಲಾಗಿದ್ದು, ಜಿಲ್ಲಾ ಬ್ಯಾಂಕರುಗಳೊಂದಿಗೆ ಸಮನ್ವಯ ವಹಿಸಿ, ಕ್ರಮ ಕೈಗೊಳ್ಳಲು ಸೂಚಿಸಲಾಯಿತು. ಬರ ಪರಿಹಾರ ಮೊತ್ತವನ್ನು ರೈತರ ಸಾಲಕ್ಕೆ ವಜಾ ಮಾಡಿಕೊಳ್ಳದಂತೆ ಬ್ಯಾಂಕರುಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮಾತನಾಡಿ, ಜಿಲ್ಲೆಯಲ್ಲಿ ಸಾಕಷ್ಟು ಬೀಜ, ರಸಗೊಬ್ಬರ, ಕೀಟನಾಶಕ ಇದೆ. ಬಿತ್ತನೆಗೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಆಧಾರ್ ಸೀಡಿಂಗ್ ಮತ್ತಿತರ ಸಮಸ್ಯೆಗಳಿಂದ 22 ಸಾವಿರ ರೈತರಿಗೆ ಪರಿಹಾರ ಧನ ಬಾಕಿ ಇತ್ತು. ಇದರಲ್ಲಿ ಹಲವಾರು ಸಮಸ್ಯೆಗಳನ್ನು ಬಗೆಹರಿಸಿದ್ದು, ಇನ್ನುಳಿದ ಸಮಸ್ಯೆಗಳನ್ನು ಸಹ ಮುಂದಿನ 2–3 ದಿನದಲ್ಲಿ ಬಗೆಹರಿಸಿ ಎಲ್ಲಾ ಅರ್ಹ ರೈತರಿಗೆ ಪರಿಹಾರ ವಿತರಣೆ ಮಾಡಲಾಗುವುದು ಎಂದು ಸಿ.ಎಂ ಅವರ ಗಮನಕ್ಕೆ ತಂದರು.

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಸಕ್ಕರೆ ಮತ್ತು ಜವಳಿ ಖಾತೆ ಸಚಿವ ಶಿವಾನಂದ ಪಾಟೀಲ, ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಯೋಜನೆ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಎಲ್.ಕೆ.ಅತೀಕ್ ಹಾಗೂ ಮತ್ತಿತರ ಹಿರಿಯ ಅಧಿಕಾರಿಗಳು ವಿಡಿಯೋ ಸಂವಾದದಲ್ಲಿ ಸಿ.ಎಂ ಅವರೊಂದಿಗೆ ಭಾಗಿಯಾಗಿದ್ದರು.

ಗದಗ ಜಿಲ್ಲೆಯಿಂದ ಡಿ.ಸಿ ಅವರೊಂದಿಗೆಜಿಲ್ಲಾ ಪಂಚಾಯತ್ ಸಿಇಓ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಸುರೇಖಾ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಸೇರಿ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

> ಕಂದಾಯ ಸಚಿವ ಕೃಷ್ಣ ಬೈರೇಗೌಡ ಮಾತನಾಡಿ, ಮೇ ತಿಂಗಳಲ್ಲಿ ಬಿತ್ತನೆ ಗುರಿ 2.95 ಲಕ್ಷ ಹೆಕ್ಟೇರ್ ಪ್ರದೇಶ. 68,000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಇನ್ನೂ 13 ದಿನ ಬಾಕಿ ಇದೆ. ಪೂರ್ವ ಮುಂಗಾರು ಮಳೆ ವಾಡಿಕೆಗಿಂತ ಹೆಚ್ಚಾಗಿದೆ. ಎಲ್ಲ ಜಿಲ್ಲಾಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಲು ಪ್ರಾರಂಭಿಸಬೇಕು ಎಂದರು.



## ದೇವಾಂಗ ಸಮಾಜದ ವಧು-ವರರ ಸಮಾವೇಶ ಮೇ 26ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ದೇವಾಂಗ ನೌಕರರ ಸಂಘದ ಬೆಳ್ಳಿ ಹಬ್ಬದ ಸಂಭ್ರಮ ಹಾಗೂ 7ನೇ ಅಂತಾರಾಷ್ಟ್ರೀಯ ದೇವಾಂಗ ವಧು–ವರರ ಸಮಾವೇಶವನ್ನು ಮೇ 25 ಮತ್ತು 26ರಂದು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ರಾಘವೇಂದ್ರ ಕೊಪ್ಪಳ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇ 25ರಂದು ಬೆಳಗ್ಗೆ 10 ಗಂಟೆಗೆ ಸಂಘದ ಬೆಳ್ಳಿ ಹಬ್ಬದ ಸಂಭ್ರಮಾಚರಣೆ




ಕಾರ್ಯಕ್ರಮವನ್ನು ಬೆಟಗೇರಿಯ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅಂತಾರಾಷ್ಟ್ರೀಯ ದೇವಾಂಗ ವಧು–ವರರ ಸಮಾವೇಶವನ್ನು ಗದಗ ನಗರದ ಗಾಣಿಗ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು.

ವಧು–ವರರ ಸಮಾವೇಶಕ್ಕೆ ಬೇರೆ ಬೇರೆ ರಾಜ್ಯದಿಂದ ಸಮಾಜದ ಯುವಕ–ಯುವತಿಯರು ಆಗಮಿಸಲಿದ್ದಾರೆ. ಈಗಾಗಲೇ 400ಕ್ಕೂ ಹೆಚ್ಚು ಜನ ನೋಂದಣಿ ಮಾಡಿಕೊಂಡಿದ್ದಾರೆ. ವಿದೇಶದಲ್ಲಿರುವ ದೇವಾಂಗ ಸಮಾಜದ ಅವಿವಾಹಿತರು ಸಹ ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳಾದ ಅರವಿಂದ ಗಂಜಿ, ಶಿವಾನಂದ ಕಲ್ಲೂರ, ವಿ.ಆರ್. ಕೋಟಿ, ರಾಜೇಂದ್ರ ಭರದ್ವಾಡ, ಶಿವಾನಂದ ಗಿಡ್ನಂದಿ, ಎಸ್.ಕೆ. ಮಾಗೊಂಡ, ಈರಪ್ಪ ಸಂಡೂರ, ವಿನಾಯಕ ಹೊಸಮನಿ, ಎಸ್. ಎಚ್. ಸೂಳಿಕೇರಿ, ದೊಡ್ಡಪ್ಪ ಮೂಲಿಮನಿ ಇತರರು ಉಪಸ್ಥಿತರಿದ್ದರು.

## ಡೊನೇಷನ್ ಹಾವಳಿಗೆ ಕಡಿವಾಣ ಹಾಕಿ

■ವಿಜಯಸಾಕ್ಷಿ ಸುದ್ದಿ, ಗದಗ

ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೇಷನ್ ಹಾವಳಿ ಹೆಚ್ಚಾಗಿದ್ದು, ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಹಾಗೂ ಶಿಕ್ಷಣ ಸಚಿವರಿಗೆ ಕರ್ನಾಟಕ ರಾಜ್ಯ ದಲಿತ ವಿದ್ಯಾರ್ಥಿ ಪರಿಷತ್‌ನ ಜಿಲ್ಲಾ ಘಟಕದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪರಿಷತ್‌ನ ಜಿಲ್ಲಾಧ್ಯಕ್ಷ ಸುರೇಶ ವಾಯ್. ಚಲವಾದಿ ಮಾತನಾಡಿ, ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದ ಪ್ರವೇಶಾತಿಗಳು ಪ್ರಾರಂಭವಾಗಿದ್ದು, ಖಾಸಗಿ ಶಿಕ್ಷಣ ಸಂಸ್ಥೆಗಳು ಬಡ ವಿದ್ಯಾರ್ಥಿಗಳಿಂದ ಬೇಕಾಬಿಟ್ಟಿ ಡೊನೇಷನ್ ಪಡಯುತ್ತಿವೆ.



ಇದರಿಂದ ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳು ಉತ್ತಮ ಶಿಕ್ಷಣವನ್ನು ಪಡೆಯುವದು ಕನಸಾಗಿದೆ.

ಖಾಸಗಿ ಶಿಕ್ಷಣ ಸಂಸ್ಥೆಗಳು ಸರ್ಕಾರ ಹೊರಡಿಸಿರುವ ಆದೇಶದಂತೆ ತರಗತಿವಾರು ಶಾಲಾ–ಕಾಲೇಜುಗಳಲ್ಲಿ ನಿಯಮಿತ ಪ್ರವೇಶ ಶುಲ್ಕವನ್ನ ಪಡೆದು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಬೇಕು.ಆದರೆ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಸರ್ಕಾರದ ಸುತ್ತೋಲೆಯನ್ನು ಗಾಳಿಗೆ ತೂರಿ ಬೇಕಾಬಿಟ್ಟಿಯಾಗಿ ಡೊನೇಷನ್ ಪಡೆಯುತ್ತಿರುವದು ಖೇದಕರ. ಇಂತಹ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಂಡು ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳಲು ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಿಭಾಗ ಮಟ್ಟದ ಎಸ್ಸಿ–ಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಬಸವರಾಜ ಮುಳ್ಳಾಳ, ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಉಪಾಧ್ಯಕ್ಷ ಲಕ್ಷ್ಮಣ ಪೂಜಾರ, ಜಿಲ್ಲಾ ಸಂಪರ್ಕ ಕಾರ್ಯದರ್ಶಿ ಗುಡದಪ್ಪ ತಳಗೇರಿ, ರೋಣ ತಾಲೂಕಾಧ್ಯಕ್ಷ ರಮೇಶ ನಂದಿ, ಪ್ರಧಾನ ಕಾರ್ಯದರ್ಶಿ ಅಭಿಷೇಕ ಕೊಪ್ಪದ, ಮುಖಂಡರಾದ ವಿನೋದ ಹಡಗಲಿ, ಗವಿಸಿದ್ದಪ್ಪ ವಿಭೂತಿ, ರಮೇಶ ಸಂಗಳದ, ಪ್ರಹ್ಲಾದ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.

## ಛಾಯಾಗ್ರಾಹಕನ ಮೇಲೆ ಹಲ್ಲೆ ನಡೆಸಿದ ಪುಂಡರ ವಿರುದ್ಧ ಕಾನೂನು ಕ್ರಮಕ್ಕೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ವೃತ್ತಿನಿರತ ಛಾಯಾಗ್ರಾಹಕನ ಮೇಲೆ ಹಲ್ಲೆ ನಡೆಸಿದ ಪುಂಡರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಗದಗ ಜಿಲ್ಲಾ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ವತಿಯಿಂದ ಸಾಂಕೇತಿಕ ಪ್ರತಿಭಟನಾ ಮೆರವಣಿಗೆ ನಡೆಸಿ, ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಂಘದ ಗದಗ ಜಿಲ್ಲಾಧ್ಯಕ್ಷ ಪವನ ಕೆ.ಮೇಹರವಾಡೆ ಮಾತನಾಡಿ, ಬೆಂಗಳೂರಿನಲ್ಲಿ ಹೊಟ್ಟೆಪಾಡಿಗಾಗಿ ಕೆಲಸ ಮಾಡುವ ಛಾಯಾಗ್ರಾಹಕನ ಮೇಲೆ ಹಲ್ಲೆ ಮಾಡಿರುವುದು ಖಂಡನೀಯ.

ಇದರಿಂದಾಗಿ ಛಾಯಗ್ರಾಹಕರಿಗೆ ಯಾವುದೇ ರಕ್ಷಣೆ ಇಲ್ಲ ಎನ್ನುವುದು ಸಾಬೀತಾಗಿದೆ. ಈ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು.

ವೃತ್ತಿನಿರತ ಛಾಯಾಗ್ರಾಹಕರಿಗೆ ಸೂಕ್ತ ರಕ್ಷಣೆ ದೊರೆಯಬೇಕು.

ಹಲ್ಲೆಗೊಳಗಾಗಿರುವ ಛಾಯಾಗ್ರಾಹಕರಿಗೆ ಸರಕಾರ ಪರಿಹಾರವನ್ನು ನೀಡಬೇಕು. ಇಂತಹ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸದಂತೆ ಸರಕಾರ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ್ರಭಾರ ಕಾರ್ಯದರ್ಶಿ ಮಹಾದೇವಗೌಡ್ರ ಸಂಕನಗೌಡ್ರ, ಚನ್ನಪ್ಪ ಬ್ಯಾಹಟ್ಟಿ, ರಾಜು ಬಾಕಳೆ, ವಿನಾಯಕ, ಸಂತೋಷ ನಾವಳ್ಳಿ, ಕೊಟ್ರೇಶ ಕುಂದ್ರಳ್ಳಿ, ಕುಮಾರ ನಾಗನೂರು, ಶರಣು ಉಪ್ಪಿನ, ಎಮ್.ಎಸ್. ಸಂಕನಗೌಡ್ರ, ಸಂತೋಷ ಗೋಕಾವಿ, ಮುತ್ತು ಹುಲಕೋಟಿ, ಪ್ರಕಾಶ ವಸ್ತ್ರದ, ರಾಮು ವಗ್ಗಿ, ವಿಶಾಲಾ ವಿಡಿಯೋ, ರಾಮ ಫೋಟೋ, ಪುಟ್ಟರಾಜ ಸ್ಟುಡಿಯೋ, ಕೊಟ್ರೇಶ ಅಕ್ಕಿ, ಪ್ರಜ್ವಲ್ ಸ್ಥಾವರದ, ದೇವ ಪವಾರ, ನಾರಾಯಣಸಾ ಮಿಸ್ಕಿನ್, ಗಣೇಶ ಪವಾರ, ರಾಮಚಂದ್ರಸಾ ಶಿದ್ಲಿಂಗ, ವೈಜನಾಥ ವಿ.ಕೌತಾಳ, ಚೇತನ ಧೂಳಾ, ಶಿವಾನಂದ ಬನಟ್ಟಿ, ಮಾಣಿಕ ಪವಾರ, ರವಿ ಬಳಿಗೇರ, ಡಿ.ಎಂ. ನಲುಡಿ ಉಪಸ್ಥಿತರಿದ್ದರು.

### ಶಿರಹಟ್ಟಿಯಲ್ಲಿ ಮುಗಿಲು ಮುಟ್ಟಿದ ಕರ್ತೃ ಶ್ರೀ ಫಕೀರೇಶ್ವರರ ಜೈಕಾರ

# ಮಹಾರಥೋತ್ಸವಕ್ಕೆ ಸಾಕ್ಷಿಯಾದ ಭಕ್ತ ಸಮೂಹ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕೋಮು–ಸೌಹಾರ್ದತೆಯ ಹರಿಕಾರ, ದ್ವೇಷ ಬಿಡು–ಪ್ರೀತಿ ಮಾಡು ಎಂಬ ದಿವ್ಯ ಸಂದೇಶ ಸಾರಿ ಶಿರಹಟ್ಟಿಯಲ್ಲಿ ಸ್ಪರೂಪಿಯಾಗಿ ನೆಲೆನಿಂತಿರುವ ಕರ್ತೃ ಶ್ರೀ ಜ.ಫಕೀರೇಶ್ವರರ ಮಹಾರಥೋತ್ಸವವು ಆಗಿ ಹುಣ್ಣಿಮೆಯ ದಿನವಾದ ಮೇ.23ರ ಸಂಜೆ 5 ಗಂಟೆ ಸುಮಾರಿಗೆ ಸಹಸ್ರಾರು ಭಕ್ತರ ಜಯಘೋಷಗಳ ನಡುವೆ ನೆರವೇರಿತು.

ಗುರುವಾರ ಬೆಳಿಗ್ಗೆ 9 ಗಂಟೆ ಸುಮಾರಿಗೆ ಶ್ರೀಮಠದ 13ನೇ ಪೀಠಾಧ್ಯಕ್ಷ ಜ.ಫ.ಸಿದ್ದರಾಮ ಶ್ರೀಗಳು ಸಂಪ್ರದಾಯದಂತೆ ಹರಿಪೂರ ಗ್ರಾಮದಿಂದ ಶಿರಹಟ್ಟಿ ಪಟ್ಟಣಕ್ಕೆ ಅದ್ದೂರಿ ಪುರಪ್ರವೇಶ ಕಾರ್ಯಕ್ರಮವು ಪಲ್ಲಕ್ಕಿ ಮಹೋತ್ಸವದೊಂದಿಗೆ ಜರುಗಿತು. ಮೇಗೇರಿ ಓಣಿಯಲ್ಲಿ ಕರ್ತೃ ಶ್ರೀ ಜ.ಫಕೀರೇಶ್ವರರ ಗದ್ದುಗೆಗೆ



ಪೂಜೆಯನ್ನು ಸಲ್ಲಿಸಿ, ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಿತು. ನಂತರ, ಶೆಟ್ಟರ ಮನೆಗಳಿಗೆ ತೆರಳಿ ಅಲ್ಲಿ ಪ್ರಸಾದವನ್ನು ಸ್ವೀಕರಿಸಿ ಸಂಜೆ 4.30ರ ಸುಮಾರಿಗೆ ಮತ್ತೆ ಪಲ್ಲಕ್ಕಿಯೊಂದಿಗೆ ಮೆರವಣಿಗೆಯು ಸಂಜೆ 5 ಗಂಟೆಯ ಹೊತ್ತಿಗೆ ಶ್ರೀಮಠವನ್ನು ತಲುಪಿದಾಗ ರಥೋತ್ಸವಕ್ಕೆ ಜ.ಫ.ಸಿದ್ದರಾಮ ಸ್ವಾಮೀಜಿ ಹಾಗೂ ಜ.ಫ.ದಿಂಗಾಲೇಶ್ವರ ಸ್ವಾಮೀಜಿ ಚಾಲನೆ ನೀಡಿದರು.

> ಈ ಸಂದರ್ಭದಲ್ಲಿ ಗಜರಾಜ ಸಮೇತ, ಒಂಟೆ, ನಂದೀಧ್ವಜ, ಸಮ್ಮಾಳ, ಡೊಳ್ಳು, ಝಾಂಜ್ ಮೇಳಗಳು ಸೇರಿದಂತೆ ಸಕಲ ವಾದ್ಯಗೋಷ್ಠಿಗಳು ಮೊಳಗಿದವು. ಬೆಳಿಗ್ಗೆಯಿಂದಲೇ ರಾಜ್ಯ ಹಾಗೂ ಹೊರರಾಜ್ಯಗಳಿಂದ ಸಹಸ್ರಾರು ಭಕ್ತರು ಆಗಮಿಸುತ್ತಲೇ ಇದ್ದರು. ಶ್ರೀಮಠದ ವಿಶಾಲವಾದ ಜಾಗೆಯಲ್ಲಿ ಬೀಡು ಬಿಟ್ಟು ರಥೋತ್ಸವವನ್ನು ವೀಕ್ಷಿಸಿದರು.

ಇಡೀ ಮಾನವ ಕುಲಕ್ಕೆ ದೇವನೊಬ್ಬ ನಾಮ ಹಲವು ಎಂಬ ತತ್ವದಡಿ ಸಮಾಜದಲ್ಲಿ ಸಾಮರಸ್ಯವನ್ನು ತರುವುದಕ್ಕಾಗಿ ಶ್ರೀ ಫಕೀರೇಶ್ವರರ ಹಿಂದೂ–ಮುಸ್ಲಿಂ ರಾಜರುಗಳಿಂದ ವಿವಿಧ ಬಿರುದಾವಳಿಗಳನ್ನು, ರತ್ನಖಚಿತ ಆಭರಣಗಳನ್ನು ಪಡೆದುಕೊಂಡು ಕೋಮು–ಸೌಹಾರ್ದತೆಯ ಹರಿಕಾರ ಎನಿಸಿಕೊಂಡಿದ್ದಾರೆ. ಹಾಗೆಯೇ ರಥವು ಸಹ ಅದೇ ಮಾದರಿಯಲ್ಲಿ ನಮ್ಮ ರಾಷ್ಟ್ರಧ್ವಜದ ಬಣ್ಣಗಳಾದ ಕೇಸರಿ–ಬಿಳಿ–ಹಸಿರು ಬಣ್ಣದಿಂದ ಕಂಗೊಳಿಸುವುದರ ಮೂಲಕ ನಾವೆಲ್ಲರೂ ಒಂದೇ ಎಂಬ ಸಂದೇಶ ಸಾರುವುದಾಗಿದೆ. ರಾಜಪೋಷಾಕು ಹಾಗೂ ರತ್ನಖಚಿತವಾದ ವಜ್ರ ವೈಢೂರ್ಯಗಳನ್ನು ಧರಿಸಿದ್ದ ಜ.ಫ.ಸಿದ್ದರಾಮಸ್ವಾಮೀಜಿ ಹಾಗೂ ಉತ್ತರಾಧಿಕಾರಿಗಳು ರಥದ ಗಾಲಿಗೆ ಕಾಯಿ ಒಡೆಯುವುದರ ಮೂಲಕ ಚಾಲನೆಯನ್ನು ನೀಡಿ ಸುಮಾರು 1 ಕಿಮೀ ದೂರದಲ್ಲಿರುವ ಪಾದಗಟ್ಟಿಯವರೆಗೂ ತೆರಳಿದರು.

## ಸಂಪಾದಕೀಯ

# ಖಾಸಗಿ ಶಾಲೆಗಳ ದುಬಾರಿ ಶುಲ್ಕಕ್ಕೆ ಇಲ್ಲ ಅಂಕುಶ

ರಾಜ್ಯದಲ್ಲಿ ಸುರಿಯುತ್ತಿರುವ ಮುಂಗಾರು ಪೂರ್ವ ಮಳೆ ರೈತ ಸಮೂಹದಲ್ಲಿ ಹೊಸ ಭರವಸೆ ಮೂಡಿಸಿದೆ. ಮಳೆಯಿಂದಾಗಿ ಬರದ ಛಾಯೆ ನಿಧಾನಕ್ಕೆ ಸರಿಯುವ ಲಕ್ಷಣಗಳು ಗೋಚರಿಸುತ್ತಿವೆ. ಮುಂಗಾರು ಆರಂಭದ ಜೊತೆಗೆ ರಾಜ್ಯದಲ್ಲಿ ಶೈಕ್ಷಣಿಕ ಕಾರ್ಯ ಚಟುವಟಿಕೆಗಳು ಚಿಗುರೊಡೆಯಲಿವೆ.

ಆದರೆ ಈ ಬಾರಿ ದುಬಾರಿ ಶುಲ್ಕದ ಕಾರಣದಿಂದ ಖಾಸಗಿ ಶಾಲೆಗಳು ಈಗ ಸದ್ದು ಮಾಡುತ್ತಿವೆ. ಅನುದಾನ ರಹಿತ ಶಾಲೆಗಳು ಸರಾಸರಿ ಶೇಕಡ 30ರಷ್ಟು ಶುಲ್ಕವನ್ನು ಏರಿಕೆ ಮಾಡಿದ್ದು, ಮಧ್ಯಮ ವರ್ಗದ ಪಾಲಕರಿಗೆ ಹೊರೆಯಾಗಿ ಪರಿಣಮಿಸಿದೆ.

ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿಲ್ಲ ಎನ್ನುವ ಕಾರಣಕ್ಕೆ ಕೆಳ ಮಧ್ಯಮ, ಮಧ್ಯಮ ವರ್ಗದ ಪಾಲಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸುತ್ತಾರೆ. ಆದರೆ ಈ ಬಾರಿ ಏಕಾಏಕಿ ಶಾಲಾ ಶುಲ್ಕ ಏರಿಕೆ ಮಾಡಿರುವುದರಿಂದ ಅಂಥ ಪಾಲಕರು ಈಗ ಆಘಾತಗೊಂಡಿದ್ದಾರೆ.

ಖಾಸಗಿ ಶಾಲೆಗಳು ಶುಲ್ಕ ಏರಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಖಾಸಗಿ ಶಾಲೆಗಳು ಎಷ್ಟು ಶುಲ್ಕ ಪಡೆಯುತ್ತಿವೆ ಎನ್ನುವುದನ್ನು ಸರ್ಕಾರಕ್ಕೆ ತಿಳಿಸಬೇಕು ಎನ್ನುವ ಸುತ್ತೋಲೆಯನ್ನು ಹೊರಡಿಸದೆ. ಆದರೆ ಆ ಸುತ್ತೋಲೆ ಯಾವುದಕ್ಕೂ ಪ್ರಯೋಜನ ಆಗುವುದಿಲ್ಲ.

ರಾಜ್ಯದಲ್ಲಿರುವ ಪ್ರತಿಷ್ಠಿತ ಖಾಸಗಿ ಶಾಲೆಗಳೆಲ್ಲವೂ ರಾಜಕಾರಣಿಗಳು, ಮಂತ್ರಿಗಳು, ಶಾಸಕರ ಒಡೆತನದಲ್ಲಿಯೇ ಇವೆ. ಹೀಗಾಗಿ ಸರಕಾರದ ಸುತ್ತೋಲೆಯನ್ನು ಗಂಭೀರವಾಗಿ ಪರಿಗಣಿಸುವ ಯಾವುದೇ ಪರಿಸ್ಥಿತಿ ಇಲ್ಲ. ದುಬಾರಿ ಶುಲ್ಕ ಕಡಿಮೆ ಮಾಡುವ ನಿಟ್ಟಿನಲ್ಲಿ ಸರಕಾರ ಏನೇ ಪ್ರಯತ್ನ ಮಾಡಿದರೂ ನಿರರ್ಥಕ.

### ಕರ್ನಾಟಕ ರಕ್ಷಣಾ ವೇದಿಕೆಯಿಂದ ಅದ್ದೂರಿ 'ನಾಗಸಮುದ್ರೋತ್ಸವ-2024'

# ಉತ್ಸವಗಳು ಸಾಮರಸ್ಯದ ಸಂಕೇತ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ನಾಗಸಮುದ್ರ ಗ್ರಾಮದ ಶ್ರೀ ಶರಣಬಸವೇಶ್ವರ ಪುರಾಣ ಮಹಾಮಂಗಲೋತ್ಸವ ಹಾಗೂ ಶ್ರೀ ದ್ಯಾಮಮ್ಮ ದೇವಿ ಮತ್ತು ದಂಡಿನ ದುರ್ಗಾದೇವಿ ಜಾತ್ರಾ ಮಹೋತ್ಸವಗಳ ಅಂಗವಾಗಿ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್.ಶಿವರಾಮೇಗೌಡ್ರ ಬಣ) ಗದಗ ಜಿಲ್ಲಾ ಘಟಕ ಮತ್ತು ಗ್ರಾಮ ಘಟಕದಿಂದ ವಿವಿಧ ಸಾಂಸ್ಕೃತಿಕ ಕಲಾ ತಂಡಗಳೊಂದಿಗೆ ನಾಗಸಮುದ್ರೋತ್ಸವ-2024ರ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು.




ಕಾರ್ಯಕ್ರಮ ದಿವ್ಯ ಸಾನ್ನಿಧ್ಯವನ್ನ ಶ್ರೀ ಅನ್ನದಾನೀಶ್ವರ ಶಾಖಾಮಠ ನರಸಾಪುರದ ಶ್ರೀ ವಿರೇಶ್ವರ ಗುರುಜಿ ಹಿರೇಮಠ ಅವರ ವಹಿಸಿಕೊಂಡು ಮಾತನಾಡಿ, ನಾಡಿನಲ್ಲಿ ನಡೆಯುವ ಉತ್ಸವ-ಜಾತ್ರೆಗಳು ಮನುಕುಲದ ಸಮಾನತೆಯ ಸಾಮರಸ್ಯದ ಸಂಕೇತವಾಗಿವೆ. ಇವುಗಳನ್ನು ಉಳಿಕೊಂಡು ಹೋಗುವುದು ಇವತ್ತಿನ ಪೀಳಿಗೆಯ ಆದ್ಯ ಕರ್ತವ್ಯವಾಗಿದೆ ಎಂದು ಆಶೀರ್ವಚನ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ವಕೀಲರ ಸಂಘದ ಅಧ್ಯಕ್ಷ ಮಾಲತೇಶ ಹಿರೇಮನಿಪಾಟೀಲ್ ವಕೀಲರು ಮಾತನಾಡಿ, ಸರಕಾರದ ಯಾವುದೇ ಅನುದಾನವನ್ನು, ಪ್ರೋತ್ಸಾಹ ಧನವನ್ನು ಪಡೆಯದೆ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್ ಶಿವರಾಮೇಗೌಡ್ರ ಬಣ) ಕಾರ್ಯಕರ್ತರು ಹಾಗೂ ನಾಗಸಮುದ್ರ ಗ್ರಾಮಸ್ಥರು ಸತತವಾಗಿ ಮೂರು ವರ್ಷಗಳ ಕಾಲ ಈ ಅದ್ದೂರಿ ನಾಗಸಮುದ್ರೋತ್ಸವ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿರುವುದು ಗದಗ ಜಿಲ್ಲೆಗೆ ಶೋಭೆ ತರುವ ಆದರ್ಶ ಕಾರ್ಯಕ್ರಮವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರವೇ ಜಿಲ್ಲಾಧ್ಯಕ್ಷ ಮಂಜುನಾಥ ಪಿ.ಪರ್ವತಗೌಡ್ರ ಮಾತನಾಡಿ, ಗ್ರಾಮದ ಜಾತ್ರಾ ಮಹೋತ್ಸಗಳ ಅಂಗವಾಗಿ ಪ್ರತಿ ವರ್ಷ ಅದ್ದೂರಿಯಾಗಿ ನಡೆಯುವ ನಾಗಸಮುದ್ರೋತ್ಸವ ಕಾರ್ಯಕ್ರಮಕ್ಕೆ ಗ್ರಾಮಸ್ಥರ ನಿಸ್ವಾರ್ಥ ಪರಿಶ್ರಮ, ಸಹಕಾರ ಹಿರಿದಾಗಿದೆ ಎಂದರಲ್ಲದೆ, ಕಾರ್ಯಕ್ರಮಕ್ಕೆ ತಮ್ಮದೇ ಆದ ಸೇವೆ ಸಲ್ಲಿಸಿದವರಿಗೆ ಧನ್ಯವಾದಗಳನ್ನ ಅರ್ಪಿಸಿದರು.

ಕಾರ್ಯಕ್ರಮದಲ್ಲಿ ಝೀ ಕನ್ನಡ ವಾಹಿನಿಯ ಸರಿಗಮಪ-19ರ ಫೈನಲಿಸ್ಟ್ ರೇವನ ಸಿದ್ದಪ್ಪ, ಸರಿಗಮಪ-20ರ ಸ್ಪರ್ಧಿ ಸುಜಾತಾ ಕಲ್ಮೇಶ ಮತ್ತು ಸ್ಪೂರ್ತಿ ಮೆಲೋಡಿಸ್ ತಂಡದವರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರಗು ತಂದರು.

ಅತಿಥಿಗಳಾಗಿ ನಿಂಗಪ್ಪ ಮಣ್ಣೂರ, ಮಲ್ಲಿಕಾರ್ಜುನ ಕಿರೆಸೂರ, ಬಸವರಾಜ ಮೇಟಿ, ನೀಲವ್ವ ಮಣ್ಣೂರ, ಬಸನಗೌಡ ಪಾಟೀಲ್, ಮಲ್ಲನಗೌಡ ಭರಮಗೌಡ್ರ, ಶಾಂತಯ್ಯ ಮುತ್ತಿನಪೆಂಡಿಮಠ, ಫಕೀರಸಾಬ್ ನದಾಫ್, ಎಸ್.ಎಸ್. ಹಳ್ಳಿಕೇರಿ, ಮಲ್ಲನಗೌಡ ಪರ್ವತಗೌಡ್ರ, ವಿರುಪಾಕ್ಷಗೌಡ ಹನಮಂತಗೌಡ್ರ, ವೀರಣ್ಣ ಕೊಳ್ಳಿ, ಹುಚ್ಚುಸಾಬ ಹೊಸಳ್ಳಿ, ಭೀಮಣ್ಣ ಇಟಗಿ, ರಮೇಶ್ ಅಬ್ಬಿಗೇರಿ, ಸುರೇಶ ಮುಳಗುಂದ, ಬಸವರಾಜ ಮುಳ್ಳಾಳ, ಬಸವರಾಜ ಗದಗಿನ, ದೇವಪ್ಪ ಕವಲೂರ, ಬಾಲಪ್ಪ ಪೂಜಾರ ಪಾಲ್ಗೊಂಡಿದ್ದರು. ಕರವೇ ಕಾರ್ಯಕರ್ತರಾದ ಲಕ್ಷ್ಮಣ ಪೂಜಾರ, ರಮೇಶ್ ಹನಮಂತಗೌಡ್ರ, ಯಲ್ಲಪ್ಪ ಹನಮಂತಗೌಡ್ರ, ಮಂಜುನಾಥ ಮಣ್ಣೂರ, ಸಂತೋಷ ಕುರವತ್ತಿ, ನಿಂಗರಾಜ ಭರಮಗೌಡ್ರ, ಸಂಜೀವ ಇಟಗಿ, ಶರಣಪ್ಪ ತಡಹಾಳ, ರವಿ ಪರ್ವತಗೌಡ್ರ ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ಜನ ಸೇರಿದ್ದರು.

ಮುಖ್ಯ ಅಥಿತಿ, ಕೆಪಿಸಿಸಿ ರಾಜ್ಯ ವಕ್ತಾರ ಡಾ. ಸಂಗಮೇಶ ಕೊಳ್ಳಿ ಮಾತನಾಡಿ, ಚಾಲುಕ್ಯರ ನಾಡು ನಾಗಸಮುದ್ರ ಗ್ರಾಮ ಐತಿಹಾಸಿಕ ಹಿನ್ನೆಲೆ ಹೊಂದಿದ್ದು, ಚಾಲುಕ್ಯರು ಸಹ ಈ ಗ್ರಾಮದ ಅಂಜನೇಯ ಮತ್ತು ಈಶ್ವರನಿಗೆ ಪೂಜಿಸುತಿದ್ದರು ಎಂದು ಈ ಭಾಗದ ಹಿರಿಯರು ಹೇಳುತ್ತಾರೆ. ಬ್ರಿಟಿಷರಿಗೆ ತಮ್ಮ ಚಾಣಾಕ್ಷತನದಿಂದ ಚಳ್ಳೆಹಣ್ಣು ತಿನ್ನಿಸಿ ಗ್ರಾಮವನ್ನು ಸಂರಕ್ಷಿಕೊಂಡ ಈ ಗ್ರಾಮ, ದೇವಾನುದೇವತೆಗಳ ಪುಣ್ಯಕ್ಷೇತ್ರವಾಗಿದೆ. ಗ್ರಾಮದಲ್ಲಿ ಪ್ರತಿವರ್ಷವೂ ಜಾತ್ರಾ ಮಹೋತ್ಸವಗಳ ಅಂಗವಾಗಿ ಕೈಗೊಳ್ಳುವ ನಾಗಸಮುದ್ರೋತ್ಸವ ಕಾರ್ಯಕ್ರಮ ನೋಡಲು ಎರಡು ಕಣ್ಣುಗಳು ಸಾಲದು ಎಂದರು.

## ಕೋಲ್ಕತ್ತಾದಲ್ಲಿ ಬಾಂಗ್ಲಾದೇಶದ ಸಂಸದ ಅನ್ವರುಲ್ ಅಝೀಂ ಕೊಲೆ ಪ್ರಕರಣ: ಮೂವರ ಬಂಧನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಭಾರತಕ್ಕೆ ಚಿಕಿತ್ಸೆಗೆಂದು ಬಂದು ಕಳೆದ ವಾರ ನಾಪತ್ತೆಯಾಗಿದ್ದ ಬಾಂಗ್ಲಾದೇಶದ ಸಂಸದ ಅನ್ವರುಲ್ ಅಝೀಂ ಅವರನ್ನು ಬುಧವಾರ ಕೋಲ್ಕತ್ತಾದಲ್ಲಿ ಹತ್ಯೆ ಮಾಡಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಮೂವರು ಬಾಂಗ್ಲಾದೇಶದ ಪ್ರಜೆಗಳನ್ನು ಬಂಧಿಸಲಾಗಿದೆ.

ಘಟನೆ ಬಗ್ಗೆ ಢಾಕಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಾಂಗ್ಲಾದೇಶದ ಗೃಹ ಸಚಿವ ಅಸಾದುಜ್ಜಮಾನ್ ಖಾನ್, ಇದೊಂದು ಪೂರ್ವ ಯೋಜಿತ ಕೊಲೆ. ಕೃತ್ಯದಲ್ಲಿ ಭಾಗಿಯಾಗಿರುವ ಎಲ್ಲಾ ಹಂತಕರು ಬಾಂಗ್ಲಾದೇಶೀಯರು ಎಂದು ನಾವು ತಿಳಿದುಕೊಂಡಿದ್ದೇವೆ. ಈಗಾಗಲೇ ಘಟನೆಗೆ ಸಂಬಂಧಿಸಿ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಹತ್ಯೆಯ ಹಿಂದಿನ ಉದ್ದೇಶ ಇನ್ನೂ ತಿಳಿದುಬಂದಿಲ್ಲ. ಈ ಉದ್ದೇಶದ ಬಗ್ಗೆ ನಾವು ಶೀಘ್ರದಲ್ಲೇ ನಿಮಗೆ ತಿಳಿಸುತ್ತೇವೆ, ಭಾರತೀಯ ಪೊಲೀಸರು ಪ್ರಕರಣದ ತನಿಖೆಗೆ ಸಹಕರಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಭಾರತಕ್ಕೆ ಚಿಕಿತ್ಸೆಗೆಂದು ಬಂದು ಕಳೆದ ವಾರ ನಾಪತ್ತೆಯಾಗಿದ್ದ ಬಾಂಗ್ಲಾದೇಶದ ಸಂಸದ ಅನ್ವರುಲ್ ಅಝೀಂ ಅವರನ್ನು ಬುಧವಾರ ಕೋಲ್ಕತ್ತಾದಲ್ಲಿ ಹತ್ಯೆ ಮಾಡಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಮೂವರು ಬಾಂಗ್ಲಾದೇಶದ ಪ್ರಜೆಗಳನ್ನು ಬಂಧಿಸಲಾಗಿದೆ.

ಘಟನೆ ಬಗ್ಗೆ ಢಾಕಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಾಂಗ್ಲಾದೇಶದ ಗೃಹ ಸಚಿವ ಅಸಾದುಜ್ಜಮಾನ್ ಖಾನ್, ಇದೊಂದು ಪೂರ್ವ ಯೋಜಿತ ಕೊಲೆ. ಕೃತ್ಯದಲ್ಲಿ ಭಾಗಿಯಾಗಿರುವ ಎಲ್ಲಾ ಹಂತಕರು ಬಾಂಗ್ಲಾದೇಶೀಯರು ಎಂದು ನಾವು ತಿಳಿದುಕೊಂಡಿದ್ದೇವೆ. ಈಗಾಗಲೇ ಘಟನೆಗೆ ಸಂಬಂಧಿಸಿ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಹತ್ಯೆಯ ಹಿಂದಿನ ಉದ್ದೇಶ ಇನ್ನೂ ತಿಳಿದುಬಂದಿಲ್ಲ. ಈ ಉದ್ದೇಶದ ಬಗ್ಗೆ ನಾವು ಶೀಘ್ರದಲ್ಲೇ ನಿಮಗೆ ತಿಳಿಸುತ್ತೇವೆ, ಭಾರತೀಯ ಪೊಲೀಸರು ಪ್ರಕರಣದ ತನಿಖೆಗೆ ಸಹಕರಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

## ಪ್ರಜ್ವಲ್ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಪಡಿಸಲು ಮುಂದಾದ ಕೇಂದ್ರ ಸರ್ಕಾರ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜೆಡಿಎಸ್ ಪಕ್ಷದಿಂದ ಅಮಾನತುಗೊಂಡಿರುವ ಸಂಸದ ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸುವಂತೆ ಕರ್ನಾಟಕ ಸರ್ಕಾರದಿಂದ ಬರೆದಿರುವ ಪತ್ರವನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಸ್ವೀಕರಿಸಿದೆ ಎಂದು ಅಧಿಕೃತ ಮೂಲಗಳನ್ನು ಉಲ್ಲೇಖಿಸಿ ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಹಲವು ಪ್ರಕರಣಗಳ ಆರೋಪ ಎದುರಿಸುತ್ತಿರುವ ಪ್ರಜ್ವಲ್ ರೇವಣ್ಣ ಕಳೆದ ತಿಂಗಳು ರಾಜ-ತಾಂತ್ರಿಕ ಪಾಸ್‌ಪೋರ್ಟ್ ಬಳಸಿ ದೇಶ ಬಿಟ್ಟು ಪಲಾಯನ ಮಾಡಿದ ನಂತರ ಕರ್ನಾಟಕ ಸರ್ಕಾರ ಕೇಂದ್ರಕ್ಕೆ ಎರಡು ಬಾರಿ ಮನವಿ ಸಲ್ಲಿಸಿದೆ.

"ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಸಂಬಂಧಿಸಿದಂತೆ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಪಡಿಸಲು ಕರ್ನಾಟಕ ಸರ್ಕಾರದಿಂದ ಎಂಇಎಗೆ ಪತ್ರ ಬಂದಿದೆ. ಇದನ್ನು ಪ್ರಕ್ರಿಯೆಗೊಳಿಸಲಾಗುತ್ತಿದೆ" ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರ ಮೊಮ್ಮಗನಾಗಿರುವ ಪ್ರಜ್ವಲ್ ರೇವಣ್ಣ, ಕಳೆದ ತಿಂಗಳ ಕೊನೆಯಲ್ಲಿ ನೂರಾರು ಸ್ಪಷ್ಟ ವೀಡಿಯೊಗಳು ಸೋರಿಕೆಯಾದ ನಂತರ ರಾಜಕೀಯ ಬಿರುಗಾಳಿಯ ಕೇಂದ್ರಬಿಂದುವಾಗಿದ್ದಾರೆ. 33 ವರ್ಷ ವಯಸ್ಸಿನ ಸಂಸದರು ಅತ್ಯಾಚಾರ, ಲೈಂಗಿಕ ಕಿರುಕುಳ ಮತ್ತು ಕ್ರಿಮಿನಲ್ ಬೆದರಿಕೆಯ ಅನೇಕ ಪ್ರಕರಣಗಳನ್ನು ಎದುರಿಸುತ್ತಿದ್ದಾರೆ.

# ಕೆಳಜಾತಿಗಳ ವಿರುದ್ಧ ವ್ಯವಸ್ಥೆಯು ಅತೀವವಾಗಿ ಒಗ್ಗೂಡಿದೆ: ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ಪಂಚಕುಲ

"ಈ ವ್ಯವಸ್ಥೆಯು ಕೆಳಜಾತಿಗಳ ವಿರುದ್ಧ ಹೆಚ್ಚು ಒಗ್ಗೂಡಿದೆ; ನನ್ನ ಅಜ್ಜಿ ಮತ್ತು ತಂದೆ ಪ್ರಧಾನಿಯಾಗಿರುವುದರಿಂದ ಒಳಗಿನಿಂದಲೇ ಈ ವ್ಯವಸ್ಥೆ ಬಗ್ಗೆ ತಿಳಿದಿದೆ" ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಹೇಳಿದ್ದಾರೆ.

"ದಲಿತರು, ಒಬಿಸಿಗಳು, ಬುಡಕಟ್ಟು ಸಮುದಾಯಗಳು ಮತ್ತು ಅಲ್ಪಸಂಖ್ಯಾತರು ಸೇರಿದಂತೆ ದೇಶದ ಶೇಕಡಾ 90 ರಷ್ಟು ಜನಸಂಖ್ಯೆಯು ದೇಶದ ನಿರೂಪಣೆ ಮತ್ತು ಅಧಿಕಾರ ರಚನೆಯಲ್ಲಿ ಪ್ರಾತಿನಿಧ್ಯವನ್ನು ಹೊಂದಿಲ್ಲ" ಎಂದು ಅವರು ಪ್ರತಿಪಾದಿಸಿದರು.

ದೇಶದ ಪ್ರಗತಿಯಲ್ಲಿ ದೇಶದ ಶೇಕಡಾ 90 ರಷ್ಟು ಜನಸಂಖ್ಯೆಯ ಭಾಗವಹಿಸುವಿಕೆಯನ್ನು ಖಚಿತಪಡಿಸುವುದು ತಮ್ಮ ಪಕ್ಷದ ಗುರಿಯಾಗಿದೆ ಎಂದು ಗಾಂಧಿ ಹೇಳಿದರು.

ಬುಧವಾರ ಸಂಜೆ ಪಂಚಕುಲದಲ್ಲಿ ನಡೆದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರಾಹುಲ್, "ಕೇಸರಿ ಪಕ್ಷದ ಅಂತ್ಯ ಬರಲಿದೆ. ನಾನು ಜೂನ್ 19, 1970 ರಂದು ಜನಿಸಿದಾಗಿನಿಂದ, ಈ ವ್ಯವಸ್ಥೆಯೊಳಗೆ ಇದ್ದೇನೆ, ನಾನು ವ್ಯವಸ್ಥೆಯನ್ನು ಒಳಗಿನಿಂದ ಅರ್ಥಮಾಡಿಕೊಂಡಿದ್ದೇನೆ. ನೀವು ನನ್ನಿಂದ ವ್ಯವಸ್ಥೆಯನ್ನು ಮರೆಮಾಡಲು ಸಾಧ್ಯವಿಲ್ಲ" ಎಂದು ಅವರು ಹೇಳಿದರು.

"ವ್ಯವಸ್ಥೆಯ ಒಳಗಿನಿಂದ ಬಂದವನಿಗೆ ಅದು ಹೇಗೆ ಚಲಿಸುತ್ತದೆ, ಯಾರಿಗೆ ಅನುಕೂಲವಾಗುತ್ತದೆ, ಅದು ಯಾವ ರೀತಿಯಲ್ಲಿ ಅನುಕೂಲವಾಗುತ್ತದೆ, ಯಾರನ್ನು ರಕ್ಷಿಸುತ್ತದೆ ಮತ್ತು ಯಾರ ಮೇಲೆ ದಾಳಿ ಮಾಡುತ್ತದೆ ಎಂದು ನನಗೆ ತಿಳಿದಿದೆ" ಎಂದು ಹೇಳಿದರು.

"ನನ್ನ ಅಜ್ಜಿ ಮತ್ತು ನಂತರ ತಂದೆ ಪ್ರಧಾನಿಯಾಗಿದ್ದಾಗ ಮತ್ತು ನಂತರ



ಡಾ. ಮನಮೋಹನ್ ಸಿಂಗ್ ಅವರು ಆ ಸ್ಥಾನದಲ್ಲಿದ್ದಾಗ ನಾನು ಪ್ರಧಾನಿ ಮನೆಗೆ ಹೋಗುತ್ತಿದ್ದೆ. ಆದ್ದರಿಂದ, ನನಗೆ ಒಳಗಿನಿಂದಲೇ ವ್ಯವಸ್ಥೆ ಬಗ್ಗೆ ತಿಳಿದಿದೆ. ಈ ವ್ಯವಸ್ಥೆಯು ಕೆಳ ಜಾತಿಗಳ ವಿರುದ್ಧ ಪ್ರಮುಖ ರೀತಿಯಲ್ಲಿ ಜೋಡಿಸಲ್ಪಟ್ಟಿದೆ ಎಂದು ನಾನು ಹೇಳುತ್ತಿದ್ದೇನೆ; ಪ್ರತಿ ಹಂತದಲ್ಲೂ" ಎಂದು ಅವರು ಹೇಳಿದರು.

"ಕಾರ್ಪೊರೇಟ್, ಮಾಧ್ಯಮ, ಅಧಿಕಾರಶಾಹಿ, ಶಿಕ್ಷಣ, ನ್ಯಾಯಾಂಗ, ಮಿಲಿಟರಿ ಮತ್ತು ಇತರೆಡೆಗಳಲ್ಲಿ ಈ ಶೇಕಡಾ 90 ರಷ್ಟು ಜನರ ಭಾಗವಹಿಸುವಿಕೆ ಇಲ್ಲ. ಅರ್ಹತೆಯ ವಾದವನ್ನು ನಿರ್ಮಿಸಲಾಗಿದೆ" ಎಂದು ಅವರು ಹೇಳಿದರು.

"ಶೇ. 90 ರಷ್ಟು ಮಂದಿಗೆ ಅರ್ಹತೆ ಇಲ್ಲ ಎಂದರೆ ಹೇಗೆ? ಹಾಗಾಗುವುದಿಲ್ಲ; ಆದ್ದರಿಂದ ವ್ಯವಸ್ಥೆಯಲ್ಲಿ ಏನಾದರೂ ಕೊರತೆ ಇರಬೇಕು. ನಾನು ಅದನ್ನು ಕಂಡುಕೊಂಡಿದ್ದೇನೆ. ನಾನು ಎಲ್ಲಾ ಅಂಕಿಅಂಶಗಳನ್ನು ಕೆದಕಿದೆ" ಎಂದು ಅವರು ಹೇಳಿದರು.

"ಮಾಧ್ಯಮದಲ್ಲಿ, ಹಿರಿಯ ಆಂಕರ್‌ಗಳು, ಹಿರಿಯ ಪ್ರಭಾವಿಗಳು, ಮಾಧ್ಯಮ ಮಾಲೀಕರು, ಹಿರಿಯ ಮ್ಯಾನೇಜರ್‌ಗಳಲ್ಲಿ ಒಬ್ಬರೂ ದಲಿತ, ಬುಡಕಟ್ಟು ಅಥವಾ ಒಬಿಸಿ ಇಲ್ಲ ಅಥವಾ ನನಗೆ ಒಬ್ಬರೂ ಸಿಕ್ಕಿಲ್ಲ" ಎಂದು ಅವರು ಹೇಳಿದ್ದಾರೆ.

"1947 ರಲ್ಲಿ ಪ್ರಾರಂಭವಾದ ಅಧಿಕಾರ ಹಸ್ತಾಂತರ. ನೀವು ಭಾರತದ ಜನಸಂಖ್ಯೆಯನ್ನು ನೋಡಿದರೆ, ಸಮೀಕ್ಷೆಯನ್ನು ನಡೆಸಿದರೆ, ಸುಮಾರು 90 ಪ್ರತಿಶತದಷ್ಟು ಜನಸಂಖ್ಯೆಯು ದಲಿತರು, ಬುಡಕಟ್ಟುಗಳು, ಒಬಿಸಿ, ಅಲ್ಪಸಂಖ್ಯಾತರು ಎಂದು ನಿಮಗೆ ತಿಳಿಯುತ್ತದೆ. ಇದು ಸತ್ಯ ಮತ್ತು ಇದನ್ನು ವಿರೋಧಿಸಲು ಸಾಧ್ಯವಿಲ್ಲ" ಎಂದು ಅವರು ಹೇಳಿದರು.

ಪ್ರತಿಯೊಬ್ಬ ವ್ಯಕ್ತಿಯೊಂದಿಗೆ ಸಮಾನವಾಗಿ ಕಾಣಬೇಕು ಎಂದು ಸಂವಿಧಾನದಲ್ಲಿ ಸ್ಪಷ್ಟವಾಗಿ ಬರೆಯಲಾಗಿದೆ. ಸಂವಿಧಾನವು ಸಮಾನತೆಯ ದಾಖಲೆಯಾಗಿದೆ ಎಂದು ಅವರು ಹೇಳಿದರು.

"ಶೇ.90 ರಷ್ಟು ಜನಸಂಖ್ಯೆ ಭಾಗವಹಿಸುವಿಕೆ ಏನು ಎಂಬುದು ನನ್ನ ಪ್ರಶ್ನೆ? ನೀವು ಭಾರತದ ನಿರೂಪಣೆ ಮತ್ತು ಅಧಿಕಾರ ರಚನೆಯನ್ನು ನೋಡಿದರೆ, ಅದು ಕಾರ್ಪೊರೇಟ್ ರಚನೆಯಾಗಿರಬಹುದು ಅಥವಾ ಮಾಧ್ಯಮದ ಸ್ನೇಹಿತರಾಗಿರಬಹುದು, ಅದು ಅಧಿಕಾರಶಾಹಿ ರಚನೆಯಾಗಿರಬಹುದು, ಈ 90ರಷ್ಟು ಜನಸಂಖ್ಯೆಯ ಪ್ರತಿಶತದ ಧ್ವನಿ ಇಲ್ಲ" ಎಂದು ಅವರು ಹೇಳಿದರು.

"ರೈತರು, ಕಾರ್ಮಿಕರು, ಕ್ಷೌರಿಕರು ಮತ್ತು ಸಫಾಯಿ ಕರ್ಮಚಾರಿಗಳಂತಹ ಜನರ ಸಮಸ್ಯೆಗಳು ಮಾಧ್ಯಮಗಳಲ್ಲಿ ಪ್ರಸ್ತಾಪವಾಗುವುದಿಲ್ಲ. ಈ ಶೇ.90ರಷ್ಟು ಜನರು ಇಲ್ಲಸಲ್ಲದ ರೀತಿಯಲ್ಲಿ ನಡೆಯುತ್ತಿದ್ದು, ಶೇ.90ರಷ್ಟು ಜನರು ಭಾಗವಹಿಸಬೇಕು" ಎಂದರು.

ಹೇಮಂತ್ ಸೋರೆನ್ ಸೇರಿದಂತೆ ಇಬ್ಬರು ಮುಖ್ಯಮಂತ್ರಿಗಳ ಬಂಧನದ ವಿಷಯವನ್ನು ಪ್ರಸ್ತಾಪಿಸಿ, "ಎರಡು ರಾಜ್ಯಗಳು ಅವರನ್ನು ಆಯ್ಕೆ ಮಾಡಿತು ಮತ್ತು ಒಬ್ಬ ಬುಡಕಟ್ಟು ಸಿಎಂ ಅವರನ್ನು ಜೈಲಿಗೆ ಕಳುಹಿಸಲಾಯಿತು; ಅವರು ಇನ್ನೂ ಹೊರಬಂದಿಲ್ಲ.ರಾಷ್ಟ್ರೀಯ ಮಾಧ್ಯಮಗಳು ಸೋರೇನ್ ಬಗ್ಗೆ ಮಾತನಾಡುವುದಿಲ್ಲ" ಎಂದು ಅವರು ಆರೋಪಿಸಿದರು.

## 400 ಸೀಟ್ ಕೊಟ್ಟರೆ ನಾವು ಜ್ಞಾನವಾಪಿಯಲ್ಲಿ ದೇವಾಲಯ ನಿರ್ಮಿಸುತ್ತೇವೆ: ಅಸ್ಸಾಂ ಸಿಎಂ ಹಿಮಂತ ಶರ್ಮಾ

■ವಿಜಯಸಾಕ್ಷಿ ಸುದ್ದಿ, ಜಾರ್ಖಂಡ್



ನಮ್ಮ ಪಕ್ಷವು 400ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆದರೆ ಮಥುರಾದಲ್ಲಿ ಭಗವಾನ್ ಕೃಷ್ಣನ ಜನ್ಮಸ್ಥಳ ಮತ್ತು ವಾರಣಾಸಿಯ ಮಸೀದಿಯಲ್ಲಿ ದೇವಾಲಯಗಳನ್ನು ನಿರ್ಮಿಸುತ್ತೇವೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ.

**ಜಾರ್ಖಂಡ್**‌ನ ಬೊಕಾರೊದಲ್ಲಿ ಬುಧವಾರ ಬಿಜೆಪಿ ಅಭ್ಯರ್ಥಿ ಧುಲ್ಲೋ ಮಹ್ತೊ ಪರವಾಗಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅಸ್ಸಾಂ ಸಿಎಂ, 2019ರ ಲೋಕಸಭೆ ಚುನಾವಣೆಯಲ್ಲಿ ಪಕ್ಷ 300ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದಾಗ ಮಾಡಿದ ಸಾಧನೆಗಳನ್ನು ಪಟ್ಟಿ ಮಾಡಿದರು.

"300 ಸ್ಥಾನಗಳನ್ನು ಗಳಿಸಿದ ನಂತರ (2019 ರಲ್ಲಿ), ಪ್ರಧಾನಿ ನರೇಂದ್ರ ಮೋದಿಯವರು ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣವಾಗುವುದನ್ನು ಖಾತ್ರಿಪಡಿಸಿದರು, ಹಿಂದೂಗಳ ಹೃದಯವನ್ನು ಗೆದ್ದರು. ನಾವು ರಾಮ್ ಲಲ್ಲಾ ಅವರನ್ನು ತಾತ್ಕಾಲಿಕ ಡೇರೆಯಿಂದ ಮುಕ್ತಗೊಳಿಸಿದ್ದೇವೆ ಮತ್ತು ಅವರ ಸಿಂಹಾಸನವನ್ನು ತೆಗೆದುಕೊಳ್ಳಲು ಅವರಿಗೆ ಸಹಾಯ ಮಾಡಿದೆವು. ಅಯೋಧ್ಯೆಯಲ್ಲಿ ರಾಮ್ ಲಲ್ಲಾ ಅವರ ಭವ್ಯವಾದ 'ಪ್ರಾಣ ಪ್ರತಿಷ್ಠೆ' ನೀವು ನಮಗೆ 300 ಸ್ಥಾನಗಳನ್ನು ನೀಡಿದಾಗ, ಹಿಂದಿನ ರಾಜ್ಯದಲ್ಲಿ ಶಾಂತಿಯನ್ನು ಮರುಸ್ಥಾಪಿಸುವ ಉದ್ದೇಶದಿಂದ ಪ್ರಧಾನಿ ಮೋದಿ ಅವರು 370 ನೇ ವಿಧಿಯನ್ನು ರದ್ದುಗೊಳಿಸಿದರು" ಎಂದು ಶರ್ಮಾ ಹೇಳಿದರು.

ಜೂನ್ 4 ರಂದು ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮತ್ತೆ ಅಧಿಕಾರಕ್ಕೆ ಬರುವಂತೆ ಜನರನ್ನು ಒತ್ತಾಯಿಸಿದ ಅಸ್ಸಾಂ ಸಿಎಂ, "ಮೋದಿಜಿಗೆ 400 ಸ್ಥಾನಗಳನ್ನು ನೀಡಿ, ನಾವು ಮಥುರಾದ ಶ್ರೀಕೃಷ್ಣನ ಜನ್ಮಸ್ಥಳ ಮತ್ತು ಜ್ಞಾನವಾಪಿ ಮಸೀದಿಯಲ್ಲಿ ದೇವಾಲಯಗಳನ್ನು ನಿರ್ಮಿಸುತ್ತೇವೆ" ಎಂದರು.

"ನಮ್ಮ ಕೆಲಸ ಇನ್ನೂ ಅಪೂರ್ಣವಾಗಿದೆ. ಇಂದಿಗೂ, ಕೃಷ್ಣ ಜನ್ಮಭೂಮಿಯಲ್ಲಿ, ಶಾಹಿ ಈದ್ಗಾ ಇದೆ, ಜ್ಞಾನವಾಪಿ ಮಂದಿರದ ಸ್ಥಳದಲ್ಲಿ, ಜ್ಞಾನವಾಪಿ ಮಸೀದಿ ಇದೆ. ಪಿಎಂ ಮೋದಿಯವರಿಗೆ 400 ಸೀಟುಗಳನ್ನು ನೀಡಿ. ಏಕೆಂದರೆ, ಕೃಷ್ಣ ಜನ್ಮಭೂಮಿಯಲ್ಲಿ ಮತ್ತು ಜ್ಞಾನವಾಪಿ ಮಸೀದಿಯಲ್ಲಿ ದೇವಾಲಯಗಳನ್ನು ನಿರ್ಮಿಸುವ ನಮ್ಮ ಅಪೂರ್ಣ ಕಾರ್ಯಗಳನ್ನು ನಾವು ಸಾಧಿಸಬೇಕಾಗಿದೆ" ಎಂದರು.

"ಕಾಶ್ಮೀರದಲ್ಲಿ ಎರಡು ಭಾಗಗಳಿವೆ, ಒಂದು ಪಾಕಿಸ್ತಾನದೊಂದಿಗೆ ಮತ್ತು ಇನ್ನೊಂದು ಭಾರತದೊಂದಿಗೆ ಇದೆ. ಮೋದಿಯವರಿಗೆ 400 ಸ್ಥಾನಗಳನ್ನು ನೀಡಿ ಮತ್ತು ನಾವು ಪಾಕ್ ಆಕ್ರಮಿತ ಜಮ್ಮುವನ್ನು ಹೇಗೆ ತರುತ್ತೇವೆ ಎಂಬುದನ್ನು ನೋಡಿ. ಕಾಶ್ಮೀರವನ್ನು ಭಾರತ-ಕ್ಕೆ ಮರಳಿ ಅವರು ಭಾರತವನ್ನು 'ವಿಶ್ವಗುರು' ಮತ್ತು ವಿಶ್ವದ ಅತ್ಯುತ್ತಮ ಆರ್ಥಿಕತೆಯನ್ನಾಗಿ ಮಾಡುತ್ತಾರೆ" ಎಂದು ಹೇಳಿದರು. ಕಾಂಗ್ರೆಸ್, ಜೆಎಂಎಂ ಮತ್ತು ಇಂಡಿಯಾ ಬ್ಲಾಕ್ ಅನ್ನು ಟೀಕಿಸಿದ ಶ್ರೀ ಶರ್ಮಾ, "ಪ್ರಧಾನಿ ನರೇಂದ್ರ ಮೋದಿ ಅವರು ಮೂರನೇ ಅವಧಿಗೆ ಅಧಿಕಾರಕ್ಕೆ ಮರಳುವುದರಲ್ಲಿ ವಿರೋಧ ಪಕ್ಷಗಳಿಗೆ ಯಾವುದೇ ಸಮಸ್ಯೆ ಇಲ್ಲ. ಆದರೆ, ಎನ್‌ಡಿಎ 400 ಸ್ಥಾನಗಳನ್ನು ಗೆಲ್ಲುವುದನ್ನು ನೋಡಲು ಸಾಧ್ಯವಿಲ್ಲ.

# ಕಲ್ಲಿದ್ದಲು ಹಗರಣ: ಅದಾನಿ ವಿರುದ್ಧ ED, CBI ಕ್ರಮ ಯಾಕಿಲ್ಲ? ಮೋದಿ ವಿರುದ್ಧ ಪ್ರತಿಪಕ್ಷಗಳು ವಾಗ್ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

'ಕಡಿಮೆ ಗುಣಮಟ್ಟದ ಕಲ್ಲಿದ್ದಲನ್ನು ಹೆಚ್ಚಿನ ಮೌಲ್ಯದ ಇಂಧನವಾಗಿ ಮಾರಾಟ ಮಾಡುವ ಮೂಲಕ ಅದಾನಿ ಕಂಪೆನಿ ವಂಚನೆ ಮಾಡಿದೆ' ಎಂದು ಸಂಘಟಿತ ಅಪರಾಧ ಮತ್ತು ಭ್ರಷ್ಟಾಚಾರ ವರದಿ ಯೋಜನೆ (OCCRP) ಮತ್ತು ಫೈನಾನ್ಷಿಯಲ್ ಟೈಮ್ಸ್‌ನ ತನಿಖಾ ವರದಿ ಬಹಿರಂಗಪಡಿಸಿತ್ತು. ಇದರ ಬೆನ್ನಲ್ಲಿ ಅದಾನಿ ಗ್ರೂಪ್‌ನ ವಂಚನೆಗೆ ಸಂಬಂಧಿಸಿ 'ಸಿಬಿಐ', 'ಇಡಿ' ಯಾಕೆ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಪ್ರತಿಪಕ್ಷಗಳು ನರೇಂದ್ರ ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿವೆ.

ಗೌತಮ್ ಅದಾನಿ ಅವರ ಕಂಪನಿಯು 'ಕಡಿಮೆ ಗುಣಮಟ್ಟದ ಕಲ್ಲಿದ್ದಲನ್ನು ಹೆಚ್ಚಿನ ಮೌಲ್ಯದ ಇಂಧನವಾಗಿ ಮಾರಾಟ ಮಾಡುವ ಮೂಲಕ ವಂಚನೆ ಮಾಡಿದೆ' ಎಂದು ವರದಿಯು ಬಹಿರಂಗಪಡಿಸಿದ್ದು, ಬೆಲೆ ಏರಿಕೆಯ ಎಲ್ಲಾ ಆರೋಪಗಳನ್ನು ಅದಾನಿ ತಿರಸ್ಕರಿಸಿದ್ದಾರೆ.

ದಾಖಲೆಗಳ ಪ್ರಕಾರ, ಜನವರಿ 2014ರಲ್ಲಿ ಅದಾನಿ ಕಂಪನಿ ಇಂಡೋನೇಷ್ಯಾದಿಂದ ಕಲ್ಲಿದ್ದಲು ಖರೀದಿಸಿತ್ತು. ಅದು ಗುಣಮಟ್ಟದಲ್ಲಿ ಪ್ರತಿ ಕಿಲೋಗ್ರಾಮ್‌ಗೆ 3,500 ಕ್ಯಾಲೊರಿಗಳನ್ನು ಹೊಂದಿತ್ತು. ಆದರೆ, ಆ ಕಲ್ಲಿದ್ದಲ್ಲನ್ನು ತಮಿಳುನಾಡು ಜನರೇಷನ್ ಅಂಡ್ ಡಿಸ್ಟ್ರಿಬ್ಯೂಷನ್ ಕಂಪನಿಗೆ (ತಂಗೆಡ್ಕೋ) ಅತ್ಯಮೂಲ್ಯ ದರ್ಜೆಯ 6,000 ಕ್ಯಾಲೋರಿಯ ಕಲ್ಲಿದ್ದಲು ಎಂದು ಮಾರಾಟ ಮಾಡಲಾಗಿದೆ. ಈ ಮೂಲಕ ಸಾರಿಗೆ ವೆಚ್ಚ ಹೊರತುಪಡಿಸಿ ಅದಾನಿ ಎರಡು ಪಟ್ಟು ಲಾಭ ಪಡೆದಿದೆ.

ಹಿಂಡೆನ್‌ಬರ್ಗ್ ರಿಸರ್ಚ್ ಅದಾನಿ ಗ್ರೂಪ್‌ನ ಸ್ಟಾಕ್ ಮ್ಯಾನಿಪ್ಯುಲೇಷನ್ ಮತ್ತು ಮಾರುಕಟ್ಟೆ ವಂಚನೆ ಬಗ್ಗೆ ಆರೋಪಿಸಿತ್ತು.

## ಅಗ್ನಿಪಥ ಯೋಜನೆ ಬಗ್ಗೆ ಮಾತನಾಡದಂತೆ ಚುನಾವಣಾ ಆಯೋಗ ಕಾಂಗ್ರೆಸ್‌ಗೆ ನಿರ್ದೇಶನ ನೀಡಿದ್ದು ತಪ್ಪು: ಚಿದಂಬರಂ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಅಗ್ನಿಪಥ ಯೋಜನೆಯನ್ನು ರಾಜಕೀಯಗೊಳಿಸದಂತೆ ಚುನಾವಣಾ ಆಯೋಗವು ತನ್ನ ಪಕ್ಷಕ್ಕೆ ನಿರ್ದೇಶನ ನೀಡಿರುವುದು ಅತ್ಯಂತ ತಪ್ಪು, ಸರ್ಕಾರದ ನೀತಿಯನ್ನು ಟೀಕಿಸುವುದು ವಿರೋಧ ಪಕ್ಷದ ಹಕ್ಕು ಎಂದು ಕಾಂಗ್ರೆಸ್ ಹಿರಿಯ ನಾಯಕ ಪಿ ಚಿದಂಬರಂ ಪ್ರತಿಪಾದಿಸಿದರು.

ಚುನಾವಣಾ ಆಯೋಗವು ಬುಧವಾರ ಆಡಳಿತಾರೂಢ ಬಿಜೆಪಿ ಮತ್ತು ಪ್ರತಿಪಕ್ಷ ಕಾಂಗ್ರೆಸ್ ವಿರುದ್ಧ ತೀವ್ರವಾಗಿ ತರಾ-ಟೆಗೆ ತೆಗೆದುಕೊಂಡಿದ್ದು, ಜಾತಿ, ಸಮುದಾಯ, ಭಾಷೆ ಮತ್ತು ಧರ್ಮದ ಆಧಾರದ ಮೇಲೆ ಪ್ರಚಾರ ಮಾಡುವುದನ್ನು ನಿಲ್ಲಿಸುವಂತೆ ಸೂಚಿಸಿದೆ.

ರಕ್ಷಣಾ ಪಡೆಗಳನ್ನು ರಾಜಕೀಯಗೊಳಿಸದಂತೆ ಮತ್ತು ಸಶಸ್ತ್ರ ಪಡೆಗಳ ಸಾಮಾಜಿಕ-ಆರ್ಥಿಕ ಸಂಯೋಜನೆಯ ಬಗ್ಗೆ ಸಂಭಾವ್ಯ ವಿಭಜಕ ಹೇಳಿಕೆಗಳನ್ನು ನೀಡದಂತೆ ಆಯೋಗವು ಕಾಂಗ್ರೆಸ್‌ಗೆ ಹೇಳಿದೆ. ಅಗ್ನಿಪಥ್ ಯೋಜನೆ ಕುರಿತು ಉನ್ನತ ಕಾಂಗ್ರೆಸ್ ನಾಯಕರು ಮಾಡಿದ ಟೀಕೆಗಳನ್ನು ಆಯೋಗ ಉಲ್ಲೇಖಿಸಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಚಿದಂಬರಂ, "ಅಗ್ನಿಪಥ್ ಯೋಜನೆಯನ್ನು ರಾಜಕೀಯಗೊಳಿಸಬೇಡಿ ಎಂದು ಕಾಂಗ್ರೆಸ್ ಪಕ್ಷಕ್ಕೆ ನಿರ್ದೇಶನ ನೀಡುವುದರಲ್ಲಿ ಚುನಾವಣಾ ಆಯೋಗದ ತಪ್ಪು" ಎಂದು ಹೇಳಿದ್ದಾರೆ.

# ಪ್ರಜ್ವಲ್ ವಾಪಸ್ ಕರೆತರಲು ಸಹಕಾರ ನೀಡಲು ಸಿದ್ಧ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹಲವಾರು ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ, ಜೆಡಿಎಸ್‌ನಿಂದ ಅಮಾನತುಗೊಂಡಿರುವ ಜೆಡಿಎಸ್ ಸಂಸದ, ಲೋಕಸಭಾ ಚುನಾವಣೆ ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಗುರುವಾರ ಹೇಳಿದ್ದು, 'ಅವರನ್ನು ದೇಶಕ್ಕೆ ಕರೆತರಲು ಕೇಂದ್ರವು ಸಹಕರಿಸಲು ಸಿದ್ಧ" ಎಂದರು.

ಈ ಬಗ್ಗೆ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಪ್ರಜ್ವಲ್ ವಿದೇಶಕ್ಕೆ ತೆರಳುವ ಮುನ್ನವೇಕೆ ಪ್ರಕರಣ ದಾಖಲಿಸಿ ಬಂಧಿಸಲಿಲ್ಲ" ಎಂದು ಪ್ರಶ್ನಿಸಿದರು. "ಕಾಂಗ್ರೆಸ್ ಪಕ್ಷವು ಕೇಂದ್ರದ ಮೇಲೆ ಆರೋಪ ಹೊರಿಸಲು ಪ್ರಯತ್ನಿಸುತ್ತಿದೆ; ಈ ವಿಷಯದಲ್ಲಿ ರಾಜಕೀಯ ಮಾಡುತ್ತಿದೆ" ಎಂದು ಕೇಂದ್ರ ಸಚಿವರು ಆರೋಪಿಸಿದರು.

ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಪಡಿಸಲು ತ್ವರಿತ ಮತ್ತು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎರಡನೇ ಪತ್ರ ಬರೆದಿರುವ ಪ್ರಶ್ನೆಗೆ ಪ್ರತಿಕ್ರಿಯಿಸಿದ ಜೋಶಿ, "ರಾಜತಾಂತ್ರಿಕ ಪಾಸ್‌ಪೋರ್ಟ್‌ಗಳನ್ನು ರದ್ದುಗೊಳಿಸುವ ಪ್ರಕ್ರಿಯೆ ಇದೆ ಇದುವರೆಗೆ ಸಿದ್ದರಾಮಯ್ಯ, ಡಿ ಕೆ ಶಿವಕುಮಾರ್ (ಉಪ ಸಿಎಂ) ಮತ್ತು ಪರಮೇಶ್ವರ (ಗೃಹ ಸಚಿವರು) ನನ್ನ ಪ್ರಶ್ನೆಗೆ ಪ್ರತಿಕ್ರಿಯಿಸಿಲ್ಲ" ಎಂದರು.

ಏಪ್ರಿಲ್ 21 ರಂದು ಕ್ಲಿಪ್ಪಿಂಗ್ (ಪ್ರಜ್ವಲ್ ಒಳಗೊಂಡ ಸ್ಪಷ್ಟ ಕ್ಲಿಪ್ಪಿಂಗ್) ಒಳಗೊಂಡ ಮೊದಲ ಪೆನ್ ಡ್ರೈವ್ ಹೊರಬಂದಿದೆ, ಪ್ರಜ್ವಲ್ ರೇವಣ್ಣ ಏಪ್ರಿಲ್ 27 ರಂದು ವಿದೇಶಕ್ಕೆ ತೆರಳಿದ್ದಾರೆ. ಅವರು ಏಳು ದಿನಗಳ ಕಾಲ ಕತ್ತೆಗಳನ್ನು ಕಾಯುತ್ತಿದ್ದರಾ? ನೀವು ಏಕೆ ಎಫ್‌ಐಆರ್ ದಾಖಲಿಸಿ ಬಂಧಿಸಲಿಲ್ಲ" ಎಂದು ಜೋಶಿ ಪ್ರಶ್ನಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಪ್ರಜ್ವಲ್ ಅವರನ್ನು ವಿದೇಶದಿಂದ ವಾಪಸ್ ಕರೆತರುವ ಪ್ರಕ್ರಿಯೆ ನಡೆಯುತ್ತಿದ್ದು, ಕಾನೂನು ಪ್ರಕಾರ ಅಗತ್ಯ ಪ್ರಕ್ರಿಯೆಗಳನ್ನು ಅನುಸರಿಸಿ ರಾಜ್ಯ ಸರ್ಕಾರ-ಕ್ಕೆ ಸಹಕಾರ ನೀಡಲು ಕೇಂದ್ರ ಸರ್ಕಾರ ಸಿದ್ಧವಿದೆ" ಎಂದರು.

### ಶ್ರೀ ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಧರ್ಮ ಜಾಗೃತಿ ಸಮಾರಂಭ

# ಬಾಳು ಬೆಳಗಲು ಸಂಸ್ಕಾರ-ಸಂಸ್ಕೃತಿ ಬೇಕು

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳಿನ ಉನ್ನತಿಗೆ ಧರ್ಮಾಚರಣೆ ಬೇಕು. ಮನುಷ್ಯನಾಗಿ ಬಾಳುವುದು ಸಂಸ್ಕೃತಿಯ ಲಕ್ಷಣ. ಬಾಳು ಬೆಳಗಲು ಸಂಸ್ಕಾರ ಮತ್ತು ಸಂಸ್ಕೃತಿ ಅವಶ್ಯಕವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಶ್ರೇಷ್ಠ ಮತ್ತು ಕನಿಷ್ಠ ಆಗುವುದು ಅವರವರ ನಡವಳಿಕೆಯಿಂದ ಎಂಬುದನ್ನು ಯಾರೂ ಮರೆಯಬಾರದು. ಪ್ರಪಂಚದ ರೋಗಗಳಿಗೆಲ್ಲ ಔಷಧಿ ಇಲ್ಲದಿದ್ದರೂ ಮನದ ರೋಗಗಳಿಗೆಲ್ಲ ಔಷಧ ಇದ್ದೇ ಇದೆ. ಮನದ ರೋಗವೇ ಇತರ ರೋಗಗಳಿಗೆ ಮೂಲ. ಎಲ್ಲ ಕಾಲಕ್ಕೂ ಸತ್ಯ ಸತ್ಯವೇ. ಸುಳ್ಳು ಸುಳ್ಳೇ. ಸತ್ಯ ಕಾಣಲು ಸಮಯ ಶ್ರಮ ಬೇಕಾಗುತ್ತದೆ. ನಡೆಯುವ ದಾರಿಯಲ್ಲಿ ತಾಕತ್ತು ಇದ್ದರೆ ತಡೆಯುವ ಶಕ್ತಿ ಯಾರಿಗೂ ಇರುವುದಿಲ್ಲ. ಮೂರ್ಖನ ಹೃದಯ ಅವನ ನಾಲಿಗೆಯಲ್ಲಿ ಇರುತ್ತದೆ. ವಿವೇಕಿಯ ನಾಲಿಗೆ ಅವನ ಹೃದಯದಲ್ಲಿ ಇರುತ್ತದೆ. ಉಜ್ವಲ ಜೀವನ ಉನ್ನತಿ ಮತ್ತು ಶ್ರೇಯಸ್ಸಿಗಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ ವಿಚಾರ ಧಾರೆಗಳನ್ನು ಅನುಸರಿಸಿ ಬಾಳಿದರೆ ನೆಮ್ಮದಿ ಶಾಂತಿ ಪ್ರಾಪ್ತವಾಗುವುದೆಂದರು.



ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠದ ಡಾ.ನಾಗಭೂಷಣ ಶಿವಾಚಾರ್ಯರು, ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯರು, ಹನುಮಾಪುರ ಹಿರೇಮಠದ ಡಾ.ಸೋಮಶೇಖರ ಶಿವಾಚಾರ್ಯರು, ಆಲೂರು ಹಿರೇಮಠದ ಶ್ರೀಗಳು, ವೀರೇಶ ಪಾಟೀಲ, ಮನು ಸಹೋದರರು ಭದ್ರಾವತಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸಾಮೂಹಿಕ ಶಿವದೀಕ್ಷಾ ನೆರವೇರಿಸಲಾಯಿತು. ಬೆಳಿಗ್ಗೆ ಕ್ಷೇತ್ರದ ಎಲ್ಲ ದೈವಗಳಿಗೆ ಪೌರ್ಣಿಮಾ ಪ್ರಯುಕ್ತ ವಿಶೇಷ ಪೂಜೆ ಜರುಗಿತು. ಆಗಮಿಸಿದ ಸಕಲ ಸದ್ಭಕ್ತರಿಗೆ ಅನ್ನ ದಾಸೋಹ ಜರುಗಿತು.

ಸಮಯ ಸಂದರ್ಭಗಳು ಯಾವಾಗಲೂ ಬದಲಾಗುತ್ತಿರುತ್ತವೆ. ಆದರೆ ಒಳ್ಳೆಯ ಸಂಬಂಧಗಳು ಹಾಗೂ ನಿಜವಾದ ಸ್ನೇಹಿತರು ಎಂದೂ ಬದಲಾಗುವುದಿಲ್ಲ. ಇತಿಹಾಸ ನಿನ್ನೆ ಸುಖವಿತ್ತೆಂದು ಹೇಳುತ್ತದೆ. ವಿಜ್ಞಾನ ನಾಳೆ ಸುಖವಿರುವುದೆಂದು ಹೇಳುತ್ತದೆ. ಆದರೆ ಧರ್ಮ ಹೇಳುತ್ತದೆ, ಸತ್ಯವಾದ ಮನಸ್ಸು ಹಾಗೂ ಸ್ವಚ್ಛವಾದ ಹೃದಯವಿದ್ದರೆ ನಿತ್ಯವೂ ಸುಖ ಇರುವುದೆಂದು ಭಾರತೀಯ ತತ್ವಜ್ಞಾನ ಹೇಳುತ್ತದೆ. ಬದುಕು ಅನ್ನುವುದು ನದಿಯ ಕೊನೆಯಿಲ್ಲದ ಪಯಣ. ಯಾವುದೂ ನಮ್ಮ ಜೊತೆ ಉಳಿಯುವುದಿಲ್ಲ. ಉಳಿಯುವುದು ಒಂದೇ, ಹೃದಯಕ್ಕೆ ತಟ್ಟಿದ ನೆನಪೆಂಬುದನ್ನು ತಿಳಿಯಬೇಕು ಎಂದು ರಂಭಾಪುರಿ ಶ್ರೀಗಳು ತಿಳಿಸಿದರು.

## ಬುದ್ಧ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬುದ್ಧ ಪೂರ್ಣಿಮೆಯ ನಿಮಿತ್ತ ರಮಾಬಾಯಿ ಅಂಬೇಡ್ಕರ ಮಹಿಳಾ ಭೀಮಶಕ್ತಿ ಸಮಿತಿ ಗದಗ ವತಿಯಿಂದ ಗೌತಮ ಬುದ್ಧ ಪುತ್ತಳಿಗೆ ಪೂಜೆ ಮಾಡುವ ಮೂಲಕ ಬುದ್ಧ ಜಯಂತಿಯನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಗೋವಿಂದರಾಜ ಬಳ್ಳಾರಿ ಮಾತನಾಡಿ, ಜಗತ್ತಿನಲ್ಲಿ ಅತಿ ವಿಶಿಷ್ಠ ಮಹಾಪುರುಷ ಭಗವಾನ್ ಬುದ್ಧರ ಜೀವನದಲ್ಲಿ ಹುಟ್ಟು, ಜ್ಞಾನೋದಯ ಹಾಗೂ ಪರಿನಿಬ್ಬಾಣ ಈ ಮೂರು ಐತಿಹಾಸಿಕ ಘಟನೆಗಳು ಸಂಭವಿಸಿವೆ ಎಂದರು.

ಯುವರಾಜ ಬಳ್ಳಾರಿ ಮಾತನಾಡಿ, ಬುದ್ಧ ಪೂರ್ಣಿಯ ಬೆಳಕು ಜಗತ್ತಿನ ಅಜ್ಞಾನದ ಅಂಧಕಾರವನ್ನು ಅಳಿಸಿ ಸುಜ್ಞಾನದ ದೀವಿಗೆಯನ್ನು ಬೆಳಗಲಿ. ಎಲ್ಲರೂ ಬುದ್ಧನ ಆದರ್ಶಗಳನ್ನು ಪಾಲಿಸಲು ತಿಳಿಸಿದರು.

ಈ ಸಂಧರ್ಭದಲ್ಲಿ ದಂಡಕ್ಕ ಯು.ಬಳ್ಳಾರಿ, ನಾಗವ್ವಾ ಕಾ.ಬಳ್ಳಾರಿ, ರೇಣುಕಾ ಗೋ.ಬಳ್ಳಾರಿ, ಪದ್ಮಾ ನಾಗರಾಜ ಕಿನ್ನಾರಿ, ನಾಗಮ್ಮ ಮ.ನಾನಬಾಲ, ಹುಲಗವ್ವಾ ರಾ.ಬಳ್ಳಾರಿ, ಲಕ್ಷ್ಮವ್ವಾ ಲಕ್ಷ್ಮಣ ಯಟ್ಟಿ, ಶಾಂತಾ ಬಳ್ಳಾರಿ, ಲಕ್ಷ್ಮಿ ಬಳ್ಳಾರಿ, ದುರ್ಗಾ ಸುಕೇಶ, ಪೂಜಾಶ್ರೀ, ಪವನಕುಮಾರ, ವಿನಾಯಕ, ಸಹಾನ, ಅಂಬಿಕಾ, ರಾಗಿಣಿ, ಐಶ್ವರ್ಯ, ಸಾಯಿಕುಮಾರ ಮುಂತಾದವರಿದ್ದರು.

## ಡಿಸಿಪಿ ರಾಜೀವ ಎಂ ಮರು ನೇಮಕಕ್ಕೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿ-ಧಾರವಾಡ ಡಿಸಿಪಿ (ಕಮಿಷನರೇಟ್) ರಾಜೀವ ಎಂ ಅವರ ಅಮಾನತ್ತು ಆದೇಶ ರದ್ದುಗೊಳಿಸಿ, ಅವರನ್ನು ಕರ್ತವ್ಯಕ್ಕೆ ಮರು ನೇಮಕ ಮಾಡಿಕೊಳ್ಳಬೇಕೆಂದು ಕರ್ನಾಟಕ ರಾಜ್ಯ ದಲಿತ ವಿದ್ಯಾರ್ಥಿ ಪರಿಷತ್ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಕಳೆದ ತಿಂಗಳು ಹುಬ್ಬಳ್ಳಿ ನಗರದ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀವ ಎಂ ಅವರು ಪ್ರಾಮಾಣಿಕವಾಗಿ ಕೆಲಸ ಮಾಡಿದ್ದರು. ಆದರೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳು, ಜಾತಿವಾದಿಗಳು ರಾಜೀವ ಎಂ ಅವರು ದಲಿತ ಎಂಬ ಕಾರಣಕ್ಕೆ ಸುಳ್ಳು ಆಪಾದನೆ ಮಾಡಿ ಅಮಾನತುಗೊಳಿಸಿರುವದು ಖೇದಕರ ಸಂಗತಿ.

ಸರ್ಕಾರ ಕೊಲೆಗಡುಕರಿಗೆ ಗಲ್ಲು ಶಿಕ್ಷೆ ವಿಧಿಸಿ ಮುಂದೆ ಇಂತಹ ಪ್ರಕರಣಗಳು ನಡೆಯದಂತೆ ಕಟ್ಟು ನಿಟ್ಟಿನ ಕ್ರಮ ಜರುಗಿಸಬೇಕೇ ಹೊರತು ನಿಷ್ಠಾವಂತ ಅಧಿಕಾರಿಗಳಿಗೆ ಕಿರುಕುಳ ನೀಡಿ ಅಮಾನತುಗೊಳಿಸಿರುವ ಸರ್ಕಾರದ ನಡೆ ಖಂಡನೀಯ. ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿ ರಾಜೀವ ಅವರ ಅಮಾನತು ಆದೇಶ ರದ್ದುಗೊಳಿಸಿ ಕರ್ತವ್ಯಕ್ಕೆ ಮರು ನೇಮಕಗೊಳಿಸಿ ದಲಿತ ಅಧಿಕಾರಿ ವರ್ಗಕ್ಕೆ ನ್ಯಾಯ ಒದಗಿಸಬೇಕು ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎಸ್ಸಿ-ಎಸ್ಟಿ ದೌರ್ಜನ್ಯ ನಿಯಂತ್ರಣ ಕಾಯ್ದೆ 1989ರ ಗದಗ ಜಿಲ್ಲಾ ಜಾಗ್ರತ ಹಾಗೂ ಉಸ್ತುವಾರಿ ಸಮಿತಿ ಸದಸ್ಯ ಸುರೇಶ ವಾಯ್.ಚಲವಾದಿ, ಮುಖಂಡರಾದ ರಮೇಶ ಎಂ.ಕಡೇಮನಿ, ಬಸವರಾಜ ಮುಳ್ಳಾಳ, ಲಕ್ಷ್ಮಣ ಪೂಜಾರ, ಗುಡದಪ್ಪ ತಳಗೇರಿ, ರಮೇಶ ನಂದಿ, ಅಭಿಷೇಕ ಕೊಪ್ಪದ, ವಿನೋದ ಹಡಗಲಿ, ಗವಿಸಿದ್ದಪ್ಪ ವಿಭೂತಿ, ರಮೇಶ ಸಂಗಳದ, ಪ್ರಹ್ಲಾದ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.

## ವಿದ್ಯೆಗೆ ಬಡತನ ಅಡ್ಡಿಯಾಗದು

■ ವಿಜಯಸಾಕ್ಷಿ ಸುದ್ದಿ, ಗದಗ



ಸಾಧನೆ ಮಾಡಲು ಮಕ್ಕಳಲ್ಲಿ ಛಲ ಮತ್ತು ಆತ್ಮಸ್ಥೈರ್ಯ ಇರಬೇಕು. ವಿದ್ಯೆ ಪಡೆಯಲು ಬಡತನ ಎಂದೂ ಅಡ್ಡಿಯಾಗಲಾರದು. ಚೆನ್ನಾಗಿ ಓದಿ, ಮಾನವೀಯ ಮೌಲ್ಯದೊಂದಿಗೆ ಭಾವೀ ಜೀವನ ರೂಪಿಸಿಕೊಂಡು ಸಮಾಜಕ್ಕೆ ಉತ್ತಮ ಕೊಡುಗೆ ನೀಡುವುದರೊಂದಿಗೆ ಹೆತ್ತ ತಂದೆ-ತಾಯಿಯರಿಗೆ ಕೀರ್ತಿ ತರಬೇಕು ಎಂದು ಸೃಷ್ಟಿ ಮಹಿಳಾ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷೆ ಚೇತನಾ ಸೀತಾರಹಳ್ಳಿ ಕರೆ ನೀಡಿದರು.

ಸೃಷ್ಟಿ ಮಹಿಳಾ ವಿವಿಧೋದ್ದೇಶಗಳ ಸಂಘದ ಕಚೇರಿಯಲ್ಲಿ ಅವರು ಕಳೆದ ಎಪ್ರೀಲ್‌ನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿನಿಯರನ್ನು ಸನ್ಮಾನಿಸಿ ಮಾತನಾಡಿದರು.

ಈ ವೇಳೆ ಭೂಮಿಕಾ ಪ್ರಶಾಂತ ಬಾಗಲಕೋಟ ಹಾಗೂ ವಿದ್ಯಾ ಬಸವರಾಜ ಚಲವಾದಿ ಇವರನ್ನು ಸನ್ಮಾನಿಸಲಾಗಿಯಿತು. ಸಂಘದ ಪದಾಧಿಕಾರಿಗಳಾದ ಸುಧಾ ಎಸ್.ಕಟ್ಟಿಮನಿ, ಶೋಭಾ ಸಿ.ಗಡಾದ, ರೇಣುಕಾ ಆರ್.ಗಡಾದ, ರೇಖಾ ಎಂ.ಬಾಗಲಕೋಟ, ಹನಮಕ್ಕ ವಾಯ್.ಗೋಕಾವಿ, ಅನಿತಾ ಆರ್.ಗೋಕಾಕ, ಶೋಭಾ ಗೋಕಾಕ, ಉಷಾ ಮಾನಪಟಿ ಉಪಸ್ಥಿತರಿದ್ದರು.

## ವಿಧಾನ ಸೌಧದ ಆವರಣದಲ್ಲಿರುವ ಮಹಾತ್ಮ ಗಾಂಧಿಜೀ ಪುತ್ಥಳಿ ಸಂರಕ್ಷಣೆಗೆ ಅಗತ್ಯ ಕ್ರಮ : ಸಭಾಪತಿಗಳ ಕಳಕಳಿಗೆ ಪ್ರಶಂಸೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಶಕ್ತಿ ಕೇಂದ್ರವಾದ ವಿಧಾನ ಸೌಧ ಮತ್ತು ವಿಕಾಸ ಸೌಧದ ಮಧ್ಯಭಾಗದ ತೆರೆದ ಪ್ರದೇಶದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯುವರ ಧ್ಯಾನಾಸಕ್ತ ಕಂಚಿನ ಪ್ರತಿಮೆಗೆ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಗೆ ಉಂಟಾಗುತ್ತಿದ್ದನ್ನು ಬಹಳ ನೋವಿನಿಂದ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಸರ್ಕಾರದ ಗಮನ ಸೆಳೆದು ಗಾಂಧಿಜೀ ಪುತ್ಥಳಿಯನ್ನು ತ್ಯಾಜ್ಯ ಮುಕ್ತವನ್ನಾಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇಶದ ಪ್ರತಿಷ್ಠಿತ ಕಟ್ಟಡವೆಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ವಿಧಾನ ಸೌಧದ ವೀಕ್ಷಣೆಗೆ ನಿತ್ಯವೂ ದೇಶ ವಿದೇಶಗಳಿಂದ, ರಾಜ್ಯ, ಅಂತಾರಾಜ್ಯಗಳಿಂದ ಗಣ್ಯರು, ಪ್ರವಾಸಿಗರು, ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಆಗಮಿಸುತ್ತಾರೆ.

ಆ ಸಂದರ್ಭದಲ್ಲಿ ಎಲ್ಲರೂ ಕಡ್ಡಾಯವಾಗಿ ಮಹಾತ್ಮ ಗಾಂಧೀಜಿಯುವರ ಪ್ರತಿಮೆ ವೀಕ್ಷಿಸಿ ಅಲ್ಲಿ ಛಾಯಾ ಚಿತ್ರಗಳನ್ನು ತೆಗೆದುಕೊಳ್ಳುವ ದೃಶ್ಯವು ನಿತ್ಯ ಸದೃಶ್ಯವಾದುದ್ದು.

ಆದರೆ ಸದರಿ ಪ್ರತಿಮೆಯು ತೆರೆದ ಪ್ರದೇಶದಲ್ಲಿರುವುದರಿಂದ ವಾತಾವರಣ ಹಾಗೂ ಪಕ್ಷಿಗಳ ಮಲ-ಮೂತ್ರಗಳಿಂದ ಉಂಟಾಗುವ ತ್ಯಾಜ್ಯ ಹಾಗೂ ಮಾಲಿನ್ಯದಿಂದ ಪ್ರತಿಮೆಯು ಸೌಂದರ್ಯಕ್ಕೆ ಧಕ್ಕೆ ಉಂಟಾಗುತ್ತಿತ್ತು.

ಇದನ್ನು ಗಮನಿಸಿ ಮಹಾತ್ಮ ಗಾಂಧೀಜೀಯುವರ ಪುತ್ಥಳಿಗೆ ತೋರಲಾಗುತ್ತಿರುವ ಅಗೌರವದ ಬಗ್ಗೆ ವ್ಯಥೆಪಟ್ಟು ಕೂಡಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳಿಗೆ ಎರಡು ಬಾರಿ ಪತ್ರ ಬರೆದು ಪ್ರತಿಮೆಯನ್ನು ಶುಭ್ರವಾಗಿರಿಸಿ ಸೂಕ್ತ ಗೌರವ ಸಲ್ಲಿಸುವಂತೆ ಸೂಚನೆ ನೀಡಿದ್ದರು.

ಈ ಬಗ್ಗೆ ರಾಜ್ಯ ಕಾನೂನು, ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸಹ ಸೂಕ್ತ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಮಾನ್ಯ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯುವರ ಒತ್ತಾಯಪೂರ್ವಕ ಆಗ್ರಹ ಹಾಗೂ ಮಾನ್ಯ ಸಚಿವರಾದ ಶ್ರೀ ಹೆಚ್.ಕೆ ಪಾಟೀಲರ ಸೂಚನೆಯಂತೆ ಅಧಿಕಾರಿಗಳು ರಾಷ್ಟ್ರಪಿತ ಮಹಾತ್ಮ ಗಾಂಧಿಜೀಯುವರ ಪುತ್ಥಳಿಗೆ ರಾಸಾಯನಿಕಯುಕ್ತ ಪದಾರ್ಥ ಹೊಂದಿದ ಸಾಧನವನ್ನು ಬಳಸಿ ಪಕ್ಷಿಗಳು ಪುತ್ಥಳಿ ಮೇಲೆ ಕುಳಿತುಕೊಳ್ಳದಂತೆ ಕ್ರಮ ಕೈಗೊಂಡಿದ್ದು ಇಂದು ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಹಾಗೂ ಸಂಸದೀಯ ವ್ಯವಹಾರ ಮತ್ತು ಪ್ರವಾಸೋಧ್ಯಮ ಸಚಿವರಾದ ಮಾನ್ಯ ಶ್ರೀ ಹೆಚ್.ಕೆ ಪಾಟೀಲರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಪುತ್ಥಳಿಯ ಮೇಲೆ ಪಕ್ಷಿಗಳ ಮಲ-ಮೂತ್ರ ಬೀಳದಂತೆ ಹಾಗೂ ಪ್ರತಿಮೆಯು ಸೌಂದರ್ಯಕ್ಕೆ ಧಕ್ಕೆ ಉಂಟಾಗದಂತೆ ಅಗತ್ಯ ಕ್ರಮ ಜರುಗಿಸುವಂತೆ ಸೂಚನೆ ನೀಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ನೈಜ ಸೌಂದರ್ಯ, ಬಾಹ್ಯ ಆಕರ್ಷಣೆ ಕುಂದದಂತೆ ನಿರಂತರವಾಗಿ ಸೂಕ್ತ ಸಂರಕ್ಷಣಾ ಕ್ರಮ ಕೈಗೊಳ್ಳುವ ಕುರಿತು ಸೂಕ್ತ ಸಾಧನ ಬಳಸಿ ರಾಷ್ಟ್ರಪಿತ ಗಾಂಧೀಜಿಯವರ ಪ್ರತಿಮೆಗೆ ಸೂಕ್ತ ಗೌರವ ಸಲ್ಲಿಸಿ ಶುಭ್ರವಾಗಿಡುವಂತೆ ವಿಧಾನ ಪರಿಷತ್ ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಅಧಿಕಾರಿಗಳಿಗೆ ಆದೇಶಿಸಿದರು.

ಮಹಾತ್ಮ ಗಾಂಧೀಜೀಯುವರ ಪ್ರತಿಮೆಯು ಸಂರಕ್ಷಣೆ ಕುರಿತಂತೆ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯುವರಿಂದ ವ್ಯಕ್ತವಾದ ಕಾಳಜಿ ಮತ್ತು ಕಳಕಳಿ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ.

ಸಭಾಪತಿಯುವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ರಾಜ್ಯಪಾಲರ ಭೇಟಿ ಮಾಡಿದ ಪತ್ರಕರ್ತರ ಸಂಘದ ನಿಯೋಗ

## ಮಾಧ್ಯಮ ಜವಬ್ದಾರಿಯನ್ನು ಶ್ಲಾಘಿಸಿದ ರಾಜ್ಯಪಾಲರು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ನಿಯೋಗವು ರಾಜ್ಯಪಾಲ ಥಾಮರ್ ಚಂದ್ ಗೆಹ್ಲೋಟ್ ಅವರನ್ನು ಸೌಹಾರ್ದಯುತವಾಗಿ ಭೇಟಿಯಾಗಿತ್ತು.

ಕೆಯುಡಬ್ಲ್ಯೂಜೆ ಹೊರನಾಡಿನ ಘಟಕವಾಗಿರುವ ಕಾಸರಗೋಡು ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘವು ಆಯೋಜಿಸಲಿರುವ ಪತ್ರಕರ್ತರ ಸಮಾರಂಭಕ್ಕೆ ಆಗಮಿಸಬೇಕು ಎಂದು ವಿನಂತಿಸಿತು.



ಸರ್ಕಾರ ಮತ್ತು ಜನರ ಮಧ್ಯೆ ಕೊಂಡಿಯಾಗಿ ಕೆಲಸ ಮಾಡುತ್ತಿರುವ ಮಾಧ್ಯಮ ಮತ್ತು ಪತ್ರಕರ್ತರು, ತಮ್ಮದೇ ಆದ ಮಹತ್ವದ ಜವಾಬ್ದಾರಿಯನ್ನು ಹೊಂದಿದ್ದು, ಸಾಮಾಜದ ಸ್ವಾಸ್ಥ್ಯ ಕಾಪಾಡುತ್ತಿದ್ದಾರೆ ಎಂದು ಶ್ಲಾಘಿಸಿದರು.

ಕೆಯುಡಬ್ಲ್ಯೂಜೆ ಹುಟ್ಟು ಹಾಕಿದ ಸಾಹಿತಿ ಮತ್ತು ಪತ್ರಕರ್ತ ಡಿ.ವಿ.ಗುಂಡಪ್ಪ ಅವರ ಬಗ್ಗೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ನೀಡಿದ ಮಾಹಿತಿ ತಿಳಿದುಕೊಂಡ ರಾಜ್ಯಪಾಲರು, ಅವರ ಆದರ್ಶದಲ್ಲಿ ಈಗಲೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ನಡೆಯುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮುಂದೆ ಕೆಯುಡಬ್ಲ್ಯೂಜೆ ಕಾರ್ಯಕ್ರಮದಲ್ಲಿ ಭಾಗ ವಹಿಸುವುದಾಗಿ ತಿಳಿಸಿದರು.

ತಾವು ಕೇಂದ್ರ ಸಚಿವರಾಗಿದ್ದ ಸಂದರ್ಭದಲ್ಲಿ ಕೇರಳ ಮತ್ತು ಕಾಸರಗೋಡು ಭಾಗಕ್ಕೆ ಭೇಟಿ ನೀಡಿದ ನೆನಪುಗಳನ್ನು ಮೆಲುಕು ಹಾಕಿದ ರಾಜ್ಯಪಾಲರು, ಗಡಿನಾಡು ಕಾಸರಗೋಡಿನ ಬಹುಭಾಷಾ ನೆಲದಲ್ಲಿ ಆಯೋಜನೆಗೊಳ್ಳುವ ಕಾರ್ಯಕ್ರಮ ಅಪೂರ್ವವಾಗಿ ಮೂಡಿಬರಲಿ ಎಂದು ಶುಭ ಹಾರೈಸಿದರು.

ಕನ್ನಡಿಗರು ಹೆಚ್ಚಾಗಿರುವ ಮತ್ತು ಕನ್ನಡದ ಪತ್ರಿಕೆಗಳನ್ನು ಓದುವ ಜನರಿರುವ ಪ್ರದೇಶವಾಗಿರುವ ಕಾಸರಗೋಡ ಜನರು ಈಗಲೂ ಭಾವನಾತ್ಮಕವಾಗಿ ಕನ್ನಡಿಗರ ಜೊತೆಗೆ ಅವಿನಾಭಾವ ಸಂಬಂದ ಹೊಂದಿದ್ದಾರೆ. ಆದ್ದರಿಂದ ಕಾಸರಗೋಡಿನಲ್ಲಿ ಕನ್ನಡ ಪತ್ರಕರ್ತರ ಬಳಗವೇ ಈ ಕಾರ್ಯಕ್ರಮ ಆಯೋಜನೆ ಮಾಡುತ್ತಿದೆ ಎಂದು ಕಾಸರಗೋಡು ಜಿಲ್ಲಾ ಸಂಘದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ವಿವರಿಸಿದರು.

ರಾಜ್ಯ ಘಟಕದ ಖಜಾಂಜಿ ವಾಸುದೇವ ಹೊಳ್ಳ, ಬೆಂಗಳೂರು ನಗರ ಜಿಲ್ಲಾ ಘಟಕ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ಕಾಸರಗೋಡು ಘಟಕದ ಕಾರ್ಯದರ್ಶಿ ಪುರುಷೋತ್ತಮ ಭಟ್ ಕೆ., ಖ್ಯಾತ ಗಾಯಕ, ಹವ್ಯಾಸಿ ಬರಹಗಾರ ಗೋ.ನಾ.ಸ್ವಾಮಿ ನಿಯೋಗದಲ್ಲಿದ್ದರು.

## ವಿದ್ಯಾರ್ಥಿ ವೇತನ ಯೋಜನೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯವು 2024-25ರ ಸಾಲಿಗೆ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನ ಯೋಜನೆ (ಎನ್‌ಓಎಸ್) ಗೆ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾಗರೋತ್ತರ ಪದವಿ, ಪಿಹೆಚ್‌ಡಿ ಉನ್ನತ ವ್ಯಾಸಂಗಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಆನ್‌ಲೈನ್ **https://overseas.tribal.gov.in** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನ ಮೇ 31 ಆಗಿರುತ್ತದೆ.

ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನ ಯೋಜನೆಗೆ ಅರ್ಜಿ ಸಲ್ಲಿಸಲು 20 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶವಿರುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಜನೆಗಳಿಂದ ಆತ್ಮಸ್ಥೈರ್ಯ ವೃದ್ಧಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಿರಂತರವಾಗಿ ಹನುಮಾನ್ ಚಾಲೀಸ್ ಪಠಣ ಮಾಡುವುದರಿಂದ ಭಕ್ತರ ಮನವನ್ನು ನಿಯಂತ್ರಣದಲ್ಲಿ ಇರಿಸಿಕೊಳ್ಳಲು ಸಾಧ್ಯವೆಂದು ಸೋಮರಾಜು ಭಜನಾ ತಂಡದ ಮುಖ್ಯಸ್ಥ ಸೋಮಣ್ಣ ತಿಳಿಸಿದರು.

ಪಟ್ಟಣದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹಡಗಲಿ ತಾಲೂಕಿನ ಸೋಮರಾಜು ಅವರ ಅಲ್ಲಿಪುರ ಹನುಮಾನ್ ಚಾಲೀಸ್ ತಂಡ ಬುಧವಾರ ಗಣಪತಿ, ಆಂಜನೇಯ, ಶಿವನಿಗೆ ಅಭಿಷೇಕದೊಂದಿಗೆ ಭಜನೆ ಪ್ರಾರಂಭಿಸಿ, ದಿನವಿಡೀ ರಾಮಜಪ, ಹನುಮಾನ್ ಚಾಲೀಸ್ ಪಠಣವನ್ನು ಕೈಗೊಂಡ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಳೆದ 51 ತಿಂಗಳಿಂದ ಲೋಕಕಲ್ಯಾಣಾರ್ಥವಾಗಿ ಪ್ರತಿ ತಿಂಗಳು ಸೋಮರಾಜು ಅವರ ಭಜನಾ ತಂಡ ರಾಜ್ಯದ ಒಂದು ಆಂಜನೇಯಸ್ವಾಮಿ ದೇವಸ್ಥಾನವನ್ನು ಆಯ್ಕೆ ಮಾಡಿಕೊಂಡು, ರಾತ್ರಿ ಅಲ್ಲಿಯೇ ತಂಗಿ ಬೆಳಿಗ್ಗೆ 5 ಗಂಟೆಯಿಂದ ದೇವಸ್ಥಾನದಲ್ಲಿ ಭಜನೆಯೊಂದಿಗೆ ಸ್ಥಳೀಯ ಭಕ್ತರನ್ನೂ ಭಜನೆ, ಪೂಜೆಯಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸುತ್ತಾರೆ. ದೇವರ ನಾಮ ಸ್ಮರಣೆಯೊಂದಿಗೆ ಆತ್ಮಸ್ಥೈರ್ಯ ವೃದ್ಧಿಸಲು ಪ್ರೇರಣೆ ನೀಡುತ್ತಾ ತಮ್ಮ ಸಂಕಲ್ಪದೊಂದಿಗೆ ಭಕ್ತರೂ ಪಾಲ್ಗೊಳ್ಳಲಿ ಎನ್ನುತ್ತಾರೆ ಸೋಮಣ್ಣ.

### ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಹಾವೇರಿ ತಾಲೂಕಾ ಘಟಕ ಉದ್ಘಾಟನೆ

## ಗುರು ಸೇವಾ ದೀಕ್ಷಾ ಸಮಾರಂಭ ನಾಳೆ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಜೀವನ ಸಾಧನೆ, ಸಂದೇಶವನ್ನು ಸ್ಮರಿಸಿಕೊಳ್ಳುವ ಉದ್ದೇಶದಿಂದ ಅಸ್ತಿತ್ವಕ್ಕೆ ತರಲಾದ ಗದುಗಿನ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಹಾವೇರಿ ತಾಲೂಕಾ ಘಟಕದ ಉದ್ಘಾಟನೆ ಮತ್ತು ಸೇವಾ ಸಮಿತಿಯ ಪದಾಧಿಕಾರಿಗಳಿಗೆ ಗುರು ಸೇವಾ ದೀಕ್ಷೆ ಸಮಾರಂಭವು ಮೇ 25ರ ಬೆಳಿಗ್ಗೆ 10.30ಕ್ಕೆ ನಗರದ ಶ್ರೀ ಹುಕ್ಕೇರಿಮಠದ ಅಕ್ಕನ ಬಳಗದ ಅಕ್ಕನ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.



ಸಮಾರಂಭದ ಉದ್ಘಾಟನೆಯನ್ನು ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಸಂಸ್ಥಾಪಕರಾದ ವೇ. ಚನ್ನವೀರಸ್ವಾಮಿ ಹಿರೇಮಠ (ಕಡಣಿ) ಗದಗಇವರು ನಡೆಸಿಕೊಡುವರು. ಸೇವಾ ಸಮಿತಿಯ ತಾಲೂಕಾ ಅಧ್ಯಕ್ಷೆ ಚಂಪಾ ಮಲ್ಲಿಕಾರ್ಜುನ ಹುಣಸಿಕಟ್ಟಿ ಹಾವೇರಿ ಇವರು ಅಧ್ಯಕ್ಷತೆ ವಹಿಸಿಕೊಳ್ಳುವರು. ಸಂಸ್ಕೃತ ಶಿಕ್ಷರು, ಪುರಾಣ ಪ್ರವಚನಕಾರರಾದ ಶ್ರೀ ಪ್ರಭುಲಿಂಗಯ್ಯ ಆರಾಧ್ಯಮಠ ಹತ್ತಿಮತ್ತೂರು, ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಹಾವೇರಿ ಜಿಲ್ಲಾಧ್ಯಕ್ಷೆ ಡಾ. ಗೀತಾ ಸುತ್ತಕೋಟೆ, ಸಮಿತಿಯ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ದ್ರಾಕ್ಷಾಯಿಣಿ ವಾಲ್ಮೀಕಿ ಇವರುಗಳು ಮುಖ್ಯಅತಿಥಿಗಳಾಗಿ ಆಗಮಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಸೇವಾ ಸಮಿತಿಯ ಸಂಸ್ಥಾಪಕರು, ಕಾರ್ಯಕಾರಿ ಮಂಡಳಿ ಸದಸ್ಯರಿಗೆ ಗುರುಸೇವಾ ದೀಕ್ಷೆ ನೀಡಿ ಸತ್ಕರಿಸಲಿದ್ದಾರೆ. ಅಂಧ ಕಲಾವಿದರುಗಳಾದ ಮಂಜುನಾಥ ಕಮ್ಮಾರ, ಸುರೇಶ ಅಂಗಡಿ ಇವರನ್ನು ಸತ್ಕರಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ಶ್ರೀ ಹುಕ್ಕೇರಿಮಠ ಅಕ್ಕನ ಬಳಗದ ಅಕ್ಕಂದಿರಿಂದ ಮತ್ತು ಸೇವಾ ಸಮಿತಿಯ ಸಹಕಾರ್ಯದರ್ಶಿ ಮಮತಾ ಮಾಗಳ ಇವರಿಂದ ವಚನ ಸಂಗೀತ ಕಾರ್ಯಕ್ರಮವಿದೆ. ಭಾರತಿ ಎಸ್.ಯಾವಗಲ್ಲ ಪ್ರಾರ್ಥನೆ ನಡೆಸಿಕೊಡುವರು. ಸಮಿತಿಯ ಕೋಶಾಧ್ಯಕ್ಷ ಫಕ್ಕೀರಶಟ್ರು ಎಸ್. ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡುವರು. ಸುರೇಖಾ ಬ.ನೆರಳೆಕರ್ ಸ್ವಾಗತ ಭಾಷಣ ಮಾಡುವರು. ವಂದನಾರ್ಪಣೆಯನ್ನು ರಶ್ಮಿ ಎನ್.ತುಪ್ಪದ ನಡೆಸಿಕೊಡುವರು. ಸೇವಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಕಲಾ ಪಿ.ಅಕ್ಕಿ ಕಾರ್ಯಕ್ರಮ ನಿರೂಪಣೆ ಮಾಡುವರು ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಹಾವೇರಿ ತಾಲೂಕಾ ಘಟಕದ ಪ್ರಧಾನ ಕಾರ್ಯದರ್ಶಿ ಶಶಿಕಲಾ ಪಿ.ಅಕ್ಕಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ವಿಶ್ವಕರ್ಮ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ 20230-24ನೇ ಸಾಲಿನ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಸಮಾಜದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಕಲಿಕಾ ಸಾಮಗ್ರಿಗಳ ವಿತರಣಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

20230-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.75ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಗಳಿಸಿದ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದಲ್ಲಿ ಮೊದಲ ಮೂರು ಸ್ಥಾನ ಗಳಿಸಿದವರಿಗೆ ಪ್ರತ್ಯೇಕವಾಗಿ ನಗದು ಪರಸ್ಕಾರ ನೀಡಲಾಗುವುದು. ಉಳಿದ ಎಲ್ಲ ಅರ್ಹ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರದೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು.

ವಿದ್ಯಾರ್ಥಿಗಳ ವಿಳಾಸ ದೃಢೀಕರಣವನ್ನು ಸಂಘದ ಸದಸ್ಯರು ತೀರ್ಮಾನಿಸುವರು. ಅರ್ಹ ವಿದ್ಯಾರ್ಥಿಗಳು ಜೂನ್ 5ರೊಳಗಾಗಿ ಸಂಘವು ನಿಗದಿಗೊಳಿಸಿದ ಗೂಗಲ್ ಫಾರ್ಮ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಗೂಗಲ್ ಫಾರ್ಮ್ ಲಿಂಕನ್ನು ಆಯ್ಕೆ ಸಮಿತಿಯವರಿಂದ ಪಡೆದುಕೊಳ್ಳಬೇಕು. ವಾಟ್ಸಪ್ ಹಾಗೂ ಇತರೆ ರೂಪದಲ್ಲಿ ಸಲ್ಲಿಸಿದ ಮಾಹಿತಿಯನ್ನು ಪರಿಗಣಿಸುವುದಿಲ್ಲ.

ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರ ಆಯ್ಕೆ ಸಮಿತಿಯ ಪ್ರಾ. ಕೆ.ಎಸ್. ಬಡಿಗೇರ-9482176166, ಸಿ.ಎಂ. ಪತ್ತಾರ-9449187796, ಬಿ.ಎಂ. ಬಡಿಗೇರ-9482001657, ಪ್ರೊ. ಆರ್.ಎಂ. ಬಡಿಗೇರ-9916765934, ವಿಜಯಕುಮಾರ ರಾಜನಾಳ-9341804366 ಈ ಸಂಖ್ಯೆಗಳಿಗೆ ಸಂಪರ್ಕಿಸಬೇಕು. ಜೂನ್ 16ರ ಬೆಳಿಗ್ಗೆ 9.30ಕ್ಕೆ ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀವಿಶ್ವಕರ್ಮ ಭವನ ಉದ್ಘಾಟನೆ, ವಿಶ್ವಕರ್ಮ ನೌಕರಶ್ರೀ, ವಿಶ್ವಕರ್ಮ ಸಾಧಕಶ್ರೀ ಪ್ರಶಸ್ತಿ ಪ್ರದಾನ, ಸಂಘದ ನಿವೃತ್ತ ಸದಸ್ಯರಿಗೆ ಸನ್ಮಾನ ಹಾಗೂ ಶ್ರೀವಿಶ್ವಕರ್ಮ ಭವನ, ವಿದ್ಯಾರ್ಥಿ ವಸತಿ ನಿಲಯಗಳ ಕಟ್ಟಡಕ್ಕೆ ದೇಣಿಗೆ ನೀಡಿದ ಮಹಾದಾನಿಗಳ ಫೋಟೋ ಅನಾವರಣ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ಮಾಡಲಾಗುವುದು ಎಂದು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ, ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಯ.ಕಮ್ಮಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸವ ಸೇವಾ ಪ್ರತಿಷ್ಠಾನದ ಡಾ.ಅಕ್ಕ ಅನ್ನಪೂರ್ಣ ತಾಯಿ ಲಿಂಗೈಕ್ಯ

■ವಿಜಯಸಾಕ್ಷಿ ಸುದ್ದಿ, ಬೀದರ್



ಬೀದರಿನ ಬಸವಸೇವಾ ಪ್ರತಿಷ್ಠಾನದ ಸಂಸ್ಥಾಪಕರು ಹಾಗೂ ಖ್ಯಾತ ಪ್ರವಚನಕಾರರಾದ ಡಾ.ಅಕ್ಕ ಅನ್ನಪೂರ್ಣ ತಾಯಿಯವರು ಮೇ 23ರಂದು ಲಿಂಗೈಕ್ಯರಾದರು. ಬಸವತತ್ವದ ಅನುಯಾಯಿಗಳಾಗಿದ್ದ ಅವರು, ಬಸವತತ್ವ ಪ್ರಸಾರಕ್ಕಾಗಿ ಜೀವನವನ್ನು ಸಮರ್ಪಿಸಿದ್ದರು.

ಗದುಗಿನ ತೋಂಟದಾರ್ಯ ಮಠದೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದ ಅವರು, ಲಿಂ. ತೋಂಟದ ಸಿದ್ಧಲಿಂಗ ಶ್ರೀಗಳು ಹಾಗೂ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಪ್ರೋತ್ಸಾಹದಿಂದ ಬಸವತತ್ವದ ಅಡಿಯಲ್ಲಿ ಸಾಮೂಹಿಕ ವಿವಾಹ, ಪ್ರವಚನ, ಕಾರ್ಯಾಗಾರ ಹೀಗೆ ಅನೇಕ ಕಾರ್ಯಕ್ರಮಗಳನ್ನು ಗದುಗಿನಲ್ಲಿಯೂ ಹಮ್ಮಿಕೊಂಡಿದ್ದರು.

ಡಾ.ಅಕ್ಕ ಅನ್ನಪೂರ್ಣ ತಾಯಿ ಅಗಲಿಕೆಗೆ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಲಿಂಗಾಯತ ಪ್ರಗತಿಶೀಲ ಸಂಘ, ಬಸವದಳ-ಬಸವಕೇಂದ್ರ ಸೇರಿದಂತೆ ನಗರದ ವಿವಿಧ ಬಸವಪರ ಸಂಘಟನೆಗಳ ಸದಸ್ಯರು ಹಾಗೂ ಬಸವಾಭಿಮಾನಿಗಳು ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

## ಕಳಸಾಪೂರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ ಗದಗ ಹಾಗೂ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಇವುಗಳ ಸಂಯೋಗದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿ ಶ್ರೀಕೃಷ್ಣಾ ಕಾರ್ಯಕ್ರಮದ ಕುರಿತು, ಆರೋಗ್ಯವನ್ನು ಕಾಪಾಡಿಕೊಳ್ಳಲು ಅನುಸರಿಸಬೇಕಾದ ಉಪಯುಕ್ತ ಸಲಹೆಗಳನ್ನು ನೀಡಿದರು. ಅತಿಥಿ ಡಾ. ಧಣಿಕುಮಾರ ಮಧುಮೇಹ ಮತ್ತು ಅಧಿಕ ರಕ್ತದೊತ್ತಡದ ಬಗ್ಗೆ ಅರಿವು ಮೂಡಿಸಿದರು.

ಮುಖ್ಯ ಅತಿಥಿಗಳಾದ ಸಿ.ಬಿ. ಪಲ್ಲೇದ ಮಾತನಾಡಿ, ಆರೋಗ್ಯ-ಕ್ಷೇಮಾಭಿವೃದ್ಧಿ ಹಾಗೂ ನರೇಗಾ ಕೂಲಿ ಕಾರ್ಮಿಕರಿಗೆ ಆರೋಗ್ಯ ಬಗೆಗಿನ ಸೂಕ್ತ ಸಲಹೆಗಳನ್ನು ನೀಡಿದರು. ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡುತ್ತಾ ಇಂದಿನ ಯುವಕರು ದುಶ್ಚಟದಿಂದ ದೂರವಾಗಬೇಕು. ನಮ್ಮ ಗ್ರಾಮ-ಹಳ್ಳಿಗಳು ದೇಶದ ಜೀವನಾಡಿಗಳು. ಅವು ಸಮೃದ್ಧಿಯಾಗಲು ಇಂದಿನ ಯುವಕರು ವ್ಯಸನಮುಕ್ತರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸುರೇಶ ಲಮಾಣಿ, ಎಂ.ಪಿ.ಎಚ್. (ಸಾರ್ವಜನಿಕ ಆರೋಗ್ಯ) ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿಗಳು, ಗ್ರಾಮೀಣ ವಾಸ್ತವ್ಯ ಮತ್ತು ಅಧ್ಯಯನದ ವಿದ್ಯಾರ್ಥಿಗಳು, ನರೇಗಾ ಕೂಲಿ ಕಾರ್ಮಿಕರು ಮತ್ತು ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು ಎಂದು ಸುರೇಶ ಲಮಾಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಛಾಯಾಗ್ರಾಹಕನ ಮೇಲೆ ಹಲ್ಲೆ ಖಂಡಿಸಿ ಪ್ರತಿಭಟನೆ । ಕ್ರಮ ಕೈಗೊಳ್ಳಲು ಮನವಿ

# ಛಾಯಾಗ್ರಾಹಕರ ಕುಟುಂಬಕ್ಕೆ ನೆರವಾಗಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ




ಇತ್ತೀಚೆಗೆ ಬೆಂಗಳೂರು ಶಿವಾಜಿನಗರದ ಶಮ್ಸ್ ಕಲ್ಯಾಣ ಮಂಟಪದಲ್ಲಿ ಕೆಲವು ಪುಂಡರು ಮದುವೆ ಕಾರ್ಯನಿರತ ಛಾಯಾಗ್ರಾಹಕರ ಮೇಲೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಲ್ಲದೆ, ಅವರ ಮೇಲೆ ಹಲ್ಲೆ ಮಾಡಿರುವುದನ್ನು ಖಂಡಿಸಿ ತಾಲೂಕು ಆಡಳಿತಸೌಧದ ಮುಂಭಾಗದಲ್ಲಿ ಹುಬ್ಬಳ್ಳಿ ಫೋಟೊ ಮತ್ತು ವಿಡಿಯೋಗ್ರಾಫರ್ ಸಂಘದ ಸದಸ್ಯರು ಪ್ರತಿಭಟನೆ ನಡೆಸಿ ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಕಿರಣ ಬಾಕಳೆ ಮಾತನಾಡಿ, ಮದುವೆ ಕಾರ್ಯದಲ್ಲಿ ನಿರತರಾದ ವಿಡಿಯೋಗ್ರಾಫರ್ ಮೇಲೆ ಮಾಡಿರುವುದು ಖಂಡನೀಯ. ಅವರ ಕ್ಯಾಮರಾ ಸಲಕರಣೆಗಳನ್ನು ಸಹ ನಾಶ ಮಾಡಿದ್ದಾರೆ. ಹೊಟ್ಟೆಪಾಡಿಗಾಗಿ ಫೋಟೋ ಹಾಗೂ ವಿಡಿಯೋ ಮಾಡುವ ಛಾಯಾಗ್ರಾಹಕರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿರುವುದು ಅಮಾನವೀಯ ಘಟನೆಯಾಗಿದೆ. ಇದರಿಂದ ಛಾಯಾಗ್ರಾಹಕರಿಗೆ ಯಾವುದೇ ರಕ್ಷಣೆ ಇಲ್ಲ ಎಂಬುದು ಸಾಬೀತಾಗಿದೆ. ಈ ಘಟನೆಯು ನಾಡಿನ ಸಮಸ್ತ ವೃತ್ತಿಪರ ಛಾಯಾಚಿತ್ರಗ್ರಾಹಕರ ಮೇಲೆ ತೀವ್ರತರವಾದ ಆಘಾತವನ್ನು ಉಂಟು ಮಾಡಿದ್ದು, ಛಾಯಾಗ್ರಾಹಕರ ಕುಟುಂಬಗಳು ತುಂಬಾ ನೋವನ್ನು ಅನುಭವಿಸುವಂತಾಗಿವೆ.

ಸಾಕಷ್ಟು ಕಲ್ಯಾಣ ಮಂಟಪದಲ್ಲಿ ಕ್ಯಾಮರಾ ಪರಿಕರಗಳ ಕಳ್ಳತನ, ಸ್ಟುಡಿಯೊಗಳಲ್ಲಿ ಕಳ್ಳತನ, ಛಾಯಾಗ್ರಾಹಕರನ್ನು ರಸ್ತೆ ಬದಿಗಳಲ್ಲಿ ತಡೆದು ಕ್ಯಾಮರಾ ಪರಿಕರಗಳನ್ನು ಕಿತ್ತುಕೊಂಡು ಹೋದ ಅನೇಕ ಪ್ರಕರಣಗಳು ನಡೆದಿವೆ, ನಡೆಯುತ್ತಲೇ ಇವೆ. ಆದ್ದರಿಂದ, ಎಲ್ಲ ಕಲ್ಯಾಣ ಮಂಟಪಗಳಲ್ಲಿ ಕಡ್ಡಾಯವಾಗಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಲು ಆದೇಶಿಸಬೇಕು. ಛಾಯಾಗ್ರಾಹಕರಿಗೂ ಸರಕಾರದ ವಿವಿಧ ಕಲ್ಯಾಣ ಯೋಜನೆಗಳಲ್ಲಿ ಸೇರಿಸಿ ಅನುದಾನವನ್ನು ಬಿಡುಗಡೆ ಮಾಡಿ, ಅವರ ಕುಟುಂಬಕ್ಕೆ ನೆರವಾಗಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ದಿನೇಶ್ ದಾಬಡೆ, ಕಾರ್ಯದರ್ಶಿ ರವೀಂದ್ರ ಕಾಟಿಗರ, ಖಜಾಂಚಿ ಅನಿಲ್ ತುರಮರಿ, ಸದಸ್ಯರಾದ ವಿನಾಯಕ್ ಸಫಾರೆ, ಪ್ರವೀಣ ಹಣಗಿ, ಶಂಕರ್ ಮಿಸ್ಕಿನ್, ಆನಂದ ರಾಜೊಳ್ಳಿ, ವಿಜಯ್ ಮೆಹರ್ವಾಡೆ, ಪ್ರಕಾಶ್ ಬಸವ, ವಜೀರ್ ಗೋಪಂಕಪ್ಪ, ರಶೀದ್, ರಾಕೇಶ್ ಪವಾರ್, ಸುಜಾತಾ ಪೋತದಾರ, ಅಲ್ಲಾಬಕ್ಷ ಅಥೋನಿ, ಆನಂದ್ ಮೆಹರ್ವಾಡೆ, ಕೃಷ್ಣ ಪೂಜಾರಿ ಸೇರಿದಂತೆ ಇತರರು ಹಾಜರಿದ್ದರು.

ಸದರಿ ಪ್ರಕರಣವನ್ನು ಕರ್ನಾಟಕ ಸರಕಾರ ಗಂಭೀರವಾಗಿ ಪರಿಗಣಿಸಿ ವೃತ್ತಿನಿರತ ಛಾಯಾಗ್ರಾಹಕರಿಗೆ ರಕ್ಷಣೆ ನೀಡಬೇಕು. ಹಲ್ಲೆ ಮಾಡಿರುವ ತಪ್ಪಿತಸ್ಥರಿಗೆ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಹಲ್ಲೆಗೊಳಗಾದ ಛಾಯಾಗ್ರಾಹಕನಿಗೆ ರಾಜ್ಯ ಸರಕಾರ ಸೂಕ್ತ ಪರಿಹಾರವನ್ನು ನೀಡಬೇಕು. ಇಂತಹ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸದಂತೆ ಸರಕಾರ ಸೂಕ್ತ ಭದ್ರತಾ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಕಿರಣ ಬಾಕಳೆ ಒತ್ತಾಯಿಸಿದರು.

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ




ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸಾಪ್ತಾಹಿಕ ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕಗಳನ್ನು ಪಡೆದ ಸಂಸ್ಥೆಯ ಸದಸ್ಯರ ಮಕ್ಕಳಾದ ವೈಷ್ಣವಿ ಯಳಮಲಿ, ದಶಾನಂದ ಸುಲ್ತಾನಪೂರ, ಅಕ್ಷತಾ ಗುಡಿಮನಿ ಹಾಗೂ ಯಶಸ್ವಿ ಆನದಂಗಲ್ಲ ಇವರನ್ನು ಸನ್ಮಾನಿಸಲಾಯಿತು.

ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ ಸರ್ವರನ್ನು ಸ್ವಾಗತಿದರು. ಅಸಿಸ್ಟಂಟ್ ಗವರ್ನರ್‌ರೊ. ಶರಣಬಸಪ್ಪ ಗುಡಿಮನಿ, ಆತಿಥ್ಯ ವಹಿಸಿದ್ದ ರೊ. ಮಹೇಶ ಕುಂದ್ರಾಳಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ವೇದಿಕೆಯಮೇಲೆ ಉಪಸ್ಥಿತರಿದ್ದರು. ಸದಸ್ಯರಾದ ರೊ. ಡಾ.ಶೇಖರ ಡಿ.ಸಜ್ಜನರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಇಂ. ಮಹಾಂತೇಶ ಬಾತಾಖಾನಿ, ರೊ. ಹೆಚ್.ಎಸ್. ಪಾಟೀಲ, ರೊ. ವಿಶ್ವನಾಥ ಯಳಮಲಿ, ರೊ. ಸುರೇಶ ಕುಂಬಾರ, ರೊ. ಅನಿಲ ಹಂದ್ರಾಳ, ರೊ. ಡಾ. ಎಸ್.ಕೆ. ನಾಲತ್ತವಾಡಮಠ, ರೊ. ಡಾ. ಪ್ರದೀಪ ಉಗಲಾಟ, ರೊ. ಕೊಟ್ರೇಶ ಹಿರೇಗೌಡರ, ರೊ.ಡಾ. ಕಮಲಾಕ್ಷಿ ಅಂಗಡಿ, ರೊ. ನರೇಶ ಜೈನ, ರೊ. ಸಂತೋಷ ಅಕ್ಕಿ, ರೊ. ಡಾ. ಆರ್.ಬಿ. ಉಪ್ಪಿನ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಬೆಳ್ಳಿಹಬ್ಬ, ಸಾಂಸ್ಕೃತಿಕ ಮೇಳ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ಸ್ಪೆಕ್ಟ್ರಂ ಇಂಗ್ಲೀಷ್ ಮೀಡಿಯಂ ಸ್ಕೂಲ್‌ನ 25ನೇ ವರ್ಷದ ಬೆಳ್ಳಿಹಬ್ಬದ ಸಂಭ್ರಮ ಮತ್ತು ಮಹಾ ಸಾಂಸ್ಕೃತಿಕ ಮೇಳ ಮೇ 24ರಿಂದ 26ವರೆಗೆ ನಡೆಯಲಿದೆ. ಮೇ 24ರಂದು ಸಂಜೆ 5ಕ್ಕೆ ಗುರುವಂದನಾ ಮತ್ತು ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮವನ್ನು ಹಳೆಯ ಶಿಕ್ಷಕ ವೃಂದದವರು ಉದ್ಘಾಟಿಸುವರು.

ಮೇ 25ರ ಬೆಳಿಗ್ಗೆ 10.30ಕ್ಕೆ ಸಾಂಸ್ಕೃತಿಕ ಚಟುವಟಿಕೆ ಮತ್ತು ವಿವಿಧ ಸ್ಪರ್ಧೆಗಳ ಕಾರ್ಯಕ್ರಮವನ್ನು ಲತಾದೇವಿ ಬಸವರಾಜ ನೆಲವಗಿ ಉದ್ಘಾಟಿಸುವರು. ಡಾ. ರೇವತಿ ನೆಲವಗಿ, ಶಿಲ್ಪಾ ಪ್ರಶಾಂತ ನೆಲವಗಿ, ಸುಷ್ಮಾ ಮಾಂತೇಶ ನೆಲವಗಿ ಉಪಸ್ಥಿತರಿರುವರು. ಮೇ 26ರಂದು ಸಂಜೆ 5ಕ್ಕೆ ಜರುಗುವ ಸಾಂಸ್ಕೃತಿಕ ಚಟುವಟಿಕೆ ಮತ್ತು ಸನ್ಮಾನ ಕಾರ್ಯಕ್ರಮದ ಸಾನ್ನಿಧ್ಯವನ್ನು ಹೂವಿನಶಿಗ್ಲಿ ಶ್ರೀ ಚನ್ನವೀರಮಹಾಸ್ವಾಮಿಗಳು ವಹಿಸುವರು.

ಬಿಸಿಎನ್ ಚಾರಿಟೇಲ್ ಟ್ರಸ್ಟ್‌ನ ಅಧ್ಯಕ್ಷ ಬಸವರಾಜ ನೆಲವಗಿ ಅಧ್ಯಕ್ಷತೆ ವಹಿಸುವರು. ಡಾ.ದೀಪಾ ಬಿಂಕದಕಟ್ಟಿ, ರೇಖಾ ಎಸ್. ವಡಕಣ್ಣವರ, ಬಸವರಾಜ ಬೆಂಡಿಗೇರಿ, ಡಾ. ಜಯಶ್ರೀ ಹೊಸಮನಿ, ಡಿ.ಎಂ. ಪೂಜಾರ, ಸುಲೇಮಾನ ಕಣಿಕೆ, ಓಂಪ್ರಕಾಶ ಜೈನ್, ಲೋಹಿತ ನೆಲವಗಿ, ಉಪಸ್ಥಿತರಿರುವರು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಅನೇಕ ಮಹನೀಯರನ್ನು ಸನ್ಮಾನಿಸಲಾಗುವುದು ಎಂದು ಆಡಳಿತಾಧಿಕಾರಿ ಬಸವರಾಜ ಯಂಡಿಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿವೃತ್ತಿ ನಿಮಿತ್ತ ಸನ್ಮಾನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ



ಕಾನೂನು ಅಧಿಕಾರಿಯಾಗಿ ನಿವೃತ್ತಿ ಹೊಂದಿದ ಪ್ರಯುಕ್ತ ಪರಿಮಳ ಪದ್ಮರಾಜ ಕುಲಕರ್ಣಿ ಅವರನ್ನು ನಗರದ ಪಂಚಾಕ್ಷರಿ ನಗರ, 1ನೇ ಎ ಕ್ರಾಸ್ ಬಡಾವಣೆಯ ನಿವಾಸಿಗಳು ಸನ್ಮಾನಿಸಿ ಶುಭ ಹಾರೈಸಿದರು.

ಪರಿಮಳ ಪಿ.ಕುಲಕರ್ಣಿಯವರು ತಮ್ಮ ಬಾಲ್ಯ ಶಿಕ್ಷಣವನ್ನು ದಾಂಡೇಲಿಯಲ್ಲಿ ಮುಗಿಸಿ, ಪ್ರೌಢ ಮತ್ತು ಉನ್ನತ ಶಿಕ್ಷಣ ಎಂ.ಕಾಂ., ಎಲ್.ಎಲ್.ಬಿ ಶಿಕ್ಷಣವನ್ನು ಧಾರವಾಡದಲ್ಲಿ ಮುಗಿಸಿ, ವೃತ್ತಿ ಕೈಗೊಂಡು, ಸುದೀರ್ಘ 38 ವರ್ಷಗಳ ಕಾಲ ಸೇವೆ ಸಲ್ಲಿಸಿನಿವೃತ್ತಿ ಹೊಂದಿದ್ದಾರೆ. ಶ್ರೀಯುತರ ನಿವೃತ್ತ ಜೀವನ ಸುಖಕರವಾಗಿರಲೆಂದು ಬಡಾವಣೆಯ ನಿವಾಸಿಗಳು ಶುಭ ಕೋರಿದರು.

ಹಿರಿಯರಾದ ಎಚ್.ಡಿ. ಹೊಸಮನಿ, ಎಸ್.ಎಚ್. ಕಲಗುಡಿ, ಎಫ್.ಎಸ್. ಶಿಂದಗಿ, ಯು.ಎಸ್. ನಿಪ್ಪಾಣಿ ಮಾತನಾಡಿದರು. ಶಿಕ್ಷಕ ಪೊಲೀಸಪಾಟೀಲ ಸ್ವಾಗತಿಸಿದರು. ನಿವೃತ್ತ ಪ್ರಾಚಾರ್ಯ ವಿ.ಬಿ. ಗಡದರ ಪರಿಚಯಿಸಿದರು. ಎಮ್.ಡಿ. ಅಡವಿ ನಿರೂಪಿಸಿದರು. ಎಮ್.ಎಮ್. ಹುಬ್ಬಳ್ಳಿ ವಂದನಾರ್ಪಣೆಗೈದರು.

ಸಮಾರಂಭದಲ್ಲಿ ಬಡಾವಣೆಯ ಅಧ್ಯಕ್ಷರು, ಉಪಾಧ್ಯಕ್ಷರು ಕಾರ್ಯದ ರ್ಶಿಗಳು, ಸಹ ಕಾರ್ಯದರ್ಶಿಗಳು ಮತ್ತು ಬಡಾವಣೆಯ ಎಲ್ಲ ಸದಸ್ಯರು ಉಪಸ್ಥಿತರಿದ್ದರು.

## ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆ: ಸಿದ್ಧತೆ ಪರಿಶೀಲಿಸಿದ ಸಿಎಂ, ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಈ ಬಾರಿ ವಾಡಿಕೆಗಿಂತ ಹೆಚ್ಚು ಮುಂಗಾರು ಮಳೆಯಾಗುವ ನಿರೀಕ್ಷೆಯಿದ್ದು, ಅತಿವೃಷ್ಟಿಯಿಂದ ಉಂಟಾಗುವ ಪರಿಸ್ಥಿತಿಯನ್ನು ನಿಭಾಯಿಸಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಇಂದು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು(ಡಿಸಿ) ಮತ್ತು ಜಿಲ್ಲಾ ಪಂಚಾಯತ್ ಸಿಇಓಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ, ಬರ ಪರಿಹಾರ ಚಟುವಟಿಕೆಗಳ ಜೊತೆಗೆ ಮುಂಗಾರು ಪೂರ್ವ ಸಿದ್ಧತೆಗಳನ್ನು ಪರಿಶೀಲಿಸಿದರು.

ಮೇ ತಿಂಗಳಲ್ಲಿ ಮುಂಗಾರು ಪೂರ್ವ ಮಳೆ ಸಾಮಾನ್ಯಕ್ಕಿಂತ ಹೆಚ್ಚಾಗಿದ್ದು, ಕೆಲವೆಡೆ ಶೇ.40 ಹಾಗೂ ಕೆಲವೆಡೆ ಶೇ.50 ಅಥವಾ ಶೇ.60ರಷ್ಟು ಮಳೆಯಾಗಿದೆ. ಕೆಲ ಜಿಲ್ಲೆಗಳಲ್ಲಿ ಬಿತ್ತನೆಯೂ ಆರಂಭವಾಗಿದೆ. ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಈ ಬಾರಿ ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

### ಬ್ರಹ್ಮವೃಂದದ ವತಿಯಿಂದ ಶಂಕರಾಚಾರ್ಯ ಜಯಂತಿ ಆಚರಣೆ

# ಶಂಕರಾಚಾರ್ಯರ ಜೀವನವೇ ಒಂದು ವೇದಾಂತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಸನಾತನ ಧರ್ಮ ಸಂಕಷ್ಟದಲ್ಲಿದ್ದಾಗ ಅವತರಿಸಿ ಧರ್ಮ ಸಂಸ್ಥಾಪನೆ ಮಾಡಿದವರು ಶ್ರೀ ಶಂಕರ ಭಗವತ್ಪಾದರು. ಇಂದು ಸನಾತನ ಧರ್ಮ ಉಚ್ರಾಯ ಸ್ಥಿತಿಯಲ್ಲಿದೆಯೆಂದರೆ ಶಂಕರಾಚಾರ್ಯರೂ ಸೇರಿದಂತೆ ಆಚಾರ್ಯತ್ರಯರ ಕೊಡುಗೆ ಅಪಾರವಾಗಿದೆ ಎಂದು ವೇ.ಮೂ ಬಾಲಚಂದ್ರಭಟ್ ಹುಲಮನಿ ಹೇಳಿದರು.

ಅವರು ಪಟ್ಟಣದ ಶ್ರೀ ಶಂಕರಭಾರತಿಮಠ ಸಮುಧಾಯಭವನದಲ್ಲಿ ಗುರುವಾರ ಬ್ರಹ್ಮವೃಂದದ ವತಿಯಿಂದ ಏರ್ಪಡಿಸಲಾಗಿದ್ದ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಲ್ಪಾಯುಷ್ಯದ ಬದುಕಿನಲ್ಲಿ ಅಗಾಧವನ್ನು ಸಾಧಿಸಿದ ಮಹಾನ್‌ಪುರುಷರು ಶಂಕರಾಚಾರ್ಯರು. ಚಿಕ್ಕ ವಯಸ್ಸಿನಲ್ಲಿಯೇ ಭಗವದ್ಗೀತೆ, ಉಪನಿಷತ್ತು ಹಾಗೂ ಬ್ರಹ್ಮಸೂತ್ರಗಳಿಗೆ ಭಾಷ್ಯ ರಚಿಸಿದ್ದಾರೆ. ಶ್ರೀ ಶಂಕರಾಚಾರ್ಯರ ಜೀವನವೇ ಒಂದು ವೇದಾಂತ. ತಮ್ಮ ಜೀವನದ ಅಲ್ಪ ಅವಧಿಯಲ್ಲಿ, ಸಮಗ್ರ ಭಾರತವನ್ನು ಮೂರು ಬಾರಿ ಕಾಲ್ನಡಿಗೆಯಿಂದ ಸಂಚರಿಸಿ, ಅಖಂಡ ಭಾರತದ ನಾಲ್ಕೂ ದಿಕ್ಕುಗಳಲ್ಲಿ, ನಾಲ್ಕು ಪೀಠಗಳನ್ನು ಸ್ಥಾಪಿಸಿ ವೇದಗಳನ್ನು ಸಂರಕ್ಷಿಸುವ ಸಾಕ್ಷಿ ಪ್ರಜ್ಞೆಯ ಕಾರ್ಯ ದೂರದರ್ಶಿತ್ವಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ತಾಲೂಕಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಮಾತನಾಡಿ, ಭಾರತ ದೇಶದಲ್ಲಿ ಹಿಂದೂ ಧರ್ಮ ಉಳಿದು ಬೆಳೆಯಲು ಶಂಕರಾಚಾರ್ಯರು ಮೂಲ ಕಾರಣೀಕರ್ತರಾಗಿದ್ದಾರೆ. ಅವರನ್ನು ಸ್ಮರಿಸುವದು ಇಂದಿನ ದಿನಮಾನಗಳಲ್ಲಿ ಅವಶ್ಯವಾಗಿದೆ. ಬ್ರಾಹ್ಮಣ ಸಮಾಜದಿಂದ ಪ್ರತಿವರ್ಷ ಹಲವಾರು ಕಾರ್ಯಕ್ರಮಗಳನ್ನು ಸಂಘಟಿಸುತ್ತಾ, ಸಮಾಜ ಸಂಘಟನೆ ಜೊತೆಗೆ ಧರ್ಮ ಸಂಘಟನೆ ಕಾರ್ಯವನ್ನು ಮಾಡಲಾಗುತ್ತಿದ್ದು, ಅನೇಕ ಪ್ರತಿಭೆಗಳನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಸಹ ಸಮಾಜದಿಂದ ಮಾಡಲಾಗುತ್ತಿದೆ. ಇಲ್ಲಿ ನಡೆಯುವ ಎಲ್ಲ ಧಾರ್ಮಿಕ ಕಾರ್ಯಕ್ರಮಗಳನ್ನು ಇತರೆ ಎಲ್ಲ ಸಮಾಜ ಬಾಂಧವರೊಂದಿಗೆ ಸೇರಿ ಮಾಡುತ್ತಿರುವದು ವಿಶೇಷವಾಗಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ವಹಿಸಿದ್ದರು. ಅತಿಥಿಗಳಾಗಿ ವಿ.ಎಲ್. ಪೂಜಾರ, ಕೆ.ಎಸ್. ಕುಲಕರ್ಣಿ, ನಾರಾಯಣಭಟ್ ಪುರಾಣಿಕ, ಗುರುಣ್ಣ ಪಾಟೀಲಕುಲಕರ್ಣಿ, ಪಿ.ಆರ್. ಕುಲಕರ್ಣಿ, ಆರ್.ಎಚ್. ಕುಲಕರ್ಣಿ, ದೃವರಾಜ ಬೆಟಗೇರಿ, ಡಿ.ಎಂ. ಪೂಜಾರ, ಅನೂಜಾ ಪೂಜಾರ, ವೀಣಾ ಪಡ್ನೀಸ್, ಮೀನಾಕ್ಷಿ ಸರ್‌ದೇಶಪಾಂಡೆ, ಗಾಯತ್ರಿ ಕುಲಕರ್ಣಿ, ಮಂಜುಳಾ ಸದಾವರ್ತಿ, ಮಂಜುನಾಥ ಸದಾವರ್ತಿ, ರಾಧಾ ಕುಲಕರ್ಣಿ, ಮೇಘನಾ ಸಾಹುಕಾರ ಸೇರಿದಂತೆ ಅನೇಕರಿದ್ದರು.

ಡಾ. ಪ್ರಸನ್ನ ಕುಲಕರ್ಣಿ, ಅರವಿಂದ ದೇಶಪಾಂಡೆ, ಕೃಷ್ಣಕುಮಾರ ಕುಲಕರ್ಣಿ ನಿರೂಪಿಸಿದರು. ಇದೇ ಸಂದರ್ಭದಲ್ಲಿ ವಿಪ್ರ ಕಲಾಶ್ರೀ ಪ್ರಶಸ್ತಿ ಪುರಸ್ಕೃತ ಅನಿಲ ಬೆಟಗೇರಿ ಅವರಿಂದ ಸಂಗೀತ ಸೇವೆ ಜರುಗಿತು. ಇವರಿಗೆ ಕೃಷ್ಣಕುಮಾರ ಕುಲಕರ್ಣಿ, ಕೃಪಾ ಕುಲಕರ್ಣಿ ತಬಲಾ ಸಾಥ್, ನಾರಾಯಣ ಮಾಯಾಚಾರ್ಯ ಹಾರ್ಮೋನಿಯಂ ಸಾಥ ನೀಡಿದರು.

ಈ ಬಾರಿ ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ, ಸಮಾಜಕ್ಕೆ ಸದಾ ಸೇವೆ ನೀಡುವವರನ್ನು ಹಾಗೂ ಬ್ರಹ್ಮವೃಂದದಿಂದ ಪ್ರತಿವರ್ಷ ಕೊಡಮಾಡುವ 'ವಿಪ್ರ ಕಲಾಶ್ರೀ' ಪ್ರಶಸ್ತಿಯನ್ನು ಈ ಬಾರಿ ಹುಬ್ಬಳ್ಳಿಯ ಹಿರಿಯ ಸಂಗೀತ ಕಲಾವಿದ ಅನಿಲ ಬೆಟಗೇರಿಯವರಿಗೆ ನೀಡಿ ಗೌರವಿಸಲು ಹೆಮ್ಮೆ ಎನಿಸುತ್ತದೆ ಎಂದರಲ್ಲದೆ, ಸಮಾಜದ ಎಲ್ಲ ಕಾರ್ಯಕ್ರಮಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಕೃಷ್ಣ ಕುಲಕರ್ಣಿ ಸಮಾಜ ಬಾಂಧವರಲ್ಲಿ ಮನವಿ ಮಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka